ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 116

ಬೆಲೆ ರೂ : 2.00

ರಾಯಚೂರು

ಪುಟ: 4

DAIRYADA DAARI NEWS PAPER

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಭಾನುವಾರ: 12–04–2026

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

# ಊಹಾ ಪತ್ರಿಕೋದ್ಯಮ ಅತ್ಯಂತ ಅಪಾಯಕಾರಿ : ಸಿಎಂ ಸಿದ್ದರಾಮಯ್ಯ

**ಬೀದರ್ ಏ11:** ಸಂವಿಧಾನದ ಆಶಯಗಳನ್ನು ಜಾರಿಗೊಳಿಸುವ ಕೆಲಸ ಮಾಡುತ್ತಿದ್ದೀವಾ ಎಂದು ಪತ್ರಕರ್ತರು ತಮ್ಮನ್ನು ತಾವು ನೋಡಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಮತ್ತು ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದರು.

ಊಹಾ ಪತ್ರಿಕೋದ್ಯಮ ಅತ್ಯಂತ ಅಪಾಯಕಾರಿಯಾದದ್ದು. ಕ್ಷುಲ್ಲಕ ವಿಚಾರವನ್ನು ದಿನವಿಡೀ ತೋರಿಸುವವರು ಅದರ ಪರಿಣಾಮದ ಬಗ್ಗೆಯೂ ಯೋಚಿಸಬೇಕು. ಗಂಡ ಹೆಂಡತಿ ಜಗಳವನ್ನು ಇಡೀ ದಿನ ತೋರಿಸಿದರೆ ಅದರಿಂದ ಸಮಾಜಕ್ಕೆ ಏನು ಪ್ರಯೋಜನ ಎಂದು ಪ್ರಶ್ನಿಸಿದರು.ಸಂವಿಧಾನದ ಆಶಯಗಳನ್ನು ಜಾರಿಗೊಳಿಸುವ ಕೆಲಸ ಮಾಡುತ್ತಿದ್ದೀವಾ ಎಂದು ಪತ್ರಕರ್ತರು ತಮ್ಮನ್ನು ತಾವು ನೋಡಿಕೊಳ್ಳಬೇಕು.

ಅಂಬೇಡ್ಕರ್ ಮತ್ತು ಮಹಾತ್ಮಗಾಂಧಿ ಇಬ್ಬರೂ ಪತ್ರಕರ್ತರಾಗಿ ಧ್ವನಿ ಇಲ್ಲದವರ ಧ್ವನಿಯಾಗಿದ್ದರು. ಸಮಾಜದಲ್ಲಿರುವ ನ್ಯೂನ್ಯತೆಗಳನ್ನು ಹೋಗಲಾಡಿಸಿ ಸಮಾಜವನ್ನು ಕಟ್ಟುವ ಕಾಯಕವನ್ನು ಬಸವಾದಿ ಶರಣರು ಮಾಡಿದ್ದರು. ಶರಣರ ಆಶಯದ ಸಮಸಮಾಜ ಆಗದಿದ್ದರೆ ಅಸಮಾನತೆ ಮುಂದುವರೆಯುತ್ತದೆ. ಮುಂದುವರೆಯಲಿ ಎನ್ನುವುದು ಪಟ್ಟಭದ್ರರ ಹಿತಾಸಕ್ತಿಯಾಗಿದೆ ಎಂದರು.



ಬಸವಣ್ಣ ತಿರಸ್ಕರಿದ್ದ ಕರ್ಮಸಿದ್ಧಾಂತವನ್ನು ಪಾಲಿಸುವವರು ಈಗ ಹೆಚ್ಚಾಗಿದ್ದಾರೆ. ಈ ಮೌಢ್ಯ ಆಚರಿಸುವವರೆಲ್ಲಾ ವಿದ್ಯಾವಂತರೇ ಎನ್ನುವುದು ಬೇಸರದ ಸಂಗತಿ ಎಂದರು.

ಆದ್ದರಿಂದ ವೈಚಾರಿಕತೆ ಇರುವ ವೈಜ್ಞಾನಿಕ ಶಿಕ್ಷಣ ಪದ್ಧತಿ ಅಗತ್ಯ. ಯಾವ ದೇವರೂ ಯಾರನ್ನೂ ಕೂಡ ಅವಿದ್ಯಾವಂತನಾಗು ಅಂತಾಗಲೀ, ಕೆಳ ಜಾತಿಯಲ್ಲೇ ಹುಟ್ಟು ಎಂದು ಬಯಸುವುದಿಲ್ಲ. ಈ ಅರಿವನ್ನು ಜನರಲ್ಲಿ ಹೆಚ್ಚಿಸುವ ಕೆಲಸ ಪತ್ರಕರ್ತರಿಂದ ಆಗಬೇಕು. ಪತ್ರಕರ್ತರು ಕೇವಲ ಮಾಹಿತಿ ಕೊಡುವವರಾಗದೆ, ಸಮಾಜ ಸುಧಾರಣೆಗೂ ಒತ್ತು ನೀಡಬೇಕು ಎಂದರು.

ಅಂಬೇಡ್ಕರ್ ಅವರ ಆಶಯದಂತೆ ಎಲ್ಲರಿಗೂ ಆರ್ಥಿಕ, ಸಾಮಾಜಿಕ ಶಕ್ತಿ ಕೊಡುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ 2013 ರಲ್ಲೂ ಮಾಡಿತ್ತು. ಈಗಲೂ ಮುಂದುವರೆಸಿದ್ದೇವೆ. ನಾವು ಬಡವರ ಪರವಾದ ಯೂನಿವರ್ಸಲ್ ಬೇಸಿಕ್ ಇನ್ ಕಂ ಆರ್ಥಿಕತೆಯನ್ನು ಪಾಲುಸುತ್ತಿದ್ದೇವೆ. ಇದನ್ನು ಪತ್ರಕರ್ತರು ಅರ್ಥ ಮಾಡಿಕೊಳ್ಳಬೇಕುಎಂದರು.

ಜಾತಿ ಸಮಾಜ ಚಲನೆ ಇಲ್ಲದ್ದು. ಸಮಾಜವನ್ನು ಚಲನಶೀಲಗೊಳಿಸಲು ವಸ್ತುನಿಷ್ಠವಾದ ವೃತ್ತಿಪರತೆಯನ್ನು ಪತ್ರಕರ್ತರು ಪಾಲಿಸಬೇಕು ಎಂದರು.ಕೆಲವು ಒಳ್ಳೆ ಪತ್ರಕರ್ತರೂ ಇದ್ದಾರೆ. ಆದರೆ ಬಹಳಷ್ಟು ಮಾಧ್ಯಮ ಸಂಸ್ಥೆಗಳು ಕಾರ್ಪೋರೇಟ್ ಹಿಡಿತಕ್ಕೆ ಒಳಪಟ್ಟಿವೆ. ಪತ್ರಕರ್ತರು ಸತ್ಯ ಬರೆದರೂ ಕೆಲವೊಮ್ಮೆ ಸಂಪಾದಕರುಗಳು ಮಾಲೀಕರ ಒತ್ತಡಕ್ಕೆ ಮಣಿದು ಬದಲಾಯಿಸಿಬಿಡುತ್ತಾರೆ. ನಾನು ಮಂತ್ರಿಯಾಗಿ 40 ವರ್ಷ ಆಯ್ತು. ನಮ್ಮ ಸರ್ಕಾರದ ಪರವಾಗಿ ಬರೆಯಿರಿ ಎಂದು ಇವತ್ತಿನವರೆಗೂ ನಾನು ಯಾರನ್ನೂ ಕೇಳಿಲ್ಲ ಎಂದರು. ಜನಸಾಮಾನ್ಯರು ಇನ್ನೂ ಪತ್ರಿಕೆಗಳ ಮೇಲೆ ನಂಬಿಕೆ ಇಟ್ಟಿದ್ದಾರೆ. ನಾನೂ ನಂಬಿಕೆ ಇಟ್ಟಿದ್ದೇನೆ ಎಂದರು.

ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ್ ಖಂಡ್ರೆ, ಸಚಿವರುಗಳಾದ ರಹೀಂ ಖಾನ್, ಶರಣ ಪ್ರಕಾಶ್ ಪಾಟೀಲ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಜಿಲ್ಲಾಧ್ಯಕ್ಷರಾದ ಆನಂದ್ 2ನೇಪುಟಕ್ಕೆ►

## ಜಮೀರ್ ಅಹ್ಮದ್ ವಿರುದ್ಧ ಅಸತ್ಯ ಪ್ರಚಾರ , ಬನ್ನೇಟ್ಟಿ ಆಕ್ರೋಶ



ಧೈರ್ಯದ ದಾರಿ

**ಮುದ್ದೇಬಿಹಾಳ:**ರಾಜ್ಯದಲ್ಲಿ ನಡೆದ ದಾವಣಗೇರೆ ಉಪಚುನಾವಣೆಯ ಹಿನ್ನಲೆಯಲ್ಲಿ ರಾಜಕೀಯ ವಾತಾವರಣ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿರುವ ಸಂದರ್ಭದಲ್ಲಿ, ಸಚಿವ ಬಿ.ಜೆಡ್. ಜಮೀರ್ ಅಹ್ಮದ್ ಅವರ ವಿರುದ್ಧ ವಿನಾಕಾರಣ ಅಸತ್ಯ ಪ್ರಚಾರ ನಡೆಯುತ್ತಿರುವುದು ಖಂಡನೀಯ ಎಂದು ಅಹಿಂದ ಯುವ ಬ್ರಿಗೇಡ್ ಅಧ್ಯಕ್ಷ ಮಕಬುಲ್ ಎ. ಬನ್ನೇಟ್ಟಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕೆಯ ಪ್ರತನಿಧಿನಿಯೊಂದಿಗೆ ಮಾತನಾಡಿದ ಅವರು, "ಜಮೀರ್ ಅಹ್ಮದ್ ಅವರು ತಮ್ಮ ರಾಜಕೀಯ ಜೀವನದಲ್ಲಿ ಸಮುದಾಯದ ಅಭಿವೃದ್ಧಿ ಹಾಗೂ ಜನಪರ ಕೆಲಸಗಳಿಗೆ ಒತ್ತು ನೀಡಿದ ನಾಯಕರು. ಆದರೆ ಉಪಚುನಾವಣೆಯ ಹೊತ್ತಿನಲ್ಲಿ ಕೆಲವರು ರಾಜಕೀಯ ಲಾಭಕ್ಕಾಗಿ ಅವರ ವ್ಯಕ್ತಿತ್ವಕ್ಕೆ ಧಕ್ಕೆ ತರುವ ಸುಳ್ಳು ಪ್ರಚಾರ ನಡೆಸುತ್ತಿರುವುದು ವಿಷಾದನೀಯ. ನಮ್ಮ ಸಮುದಾಯದ ನಾಯಕರಿಂದಲೇ ನಮ್ಮ ನಾಯಕರನ್ನು ತುಳಿಯುವ ಪ್ರವೃತ್ತಿ ಕಾಣಿಸುತ್ತಿದೆ," ಎಂದು ಆರೋಪಿಸಿದರು.

"ಇಂತಹ ಅಸತ್ಯ ಆರೋಪಗಳು ಮತ್ತು ನಿಂದನಾತ್ಮಕ ರಾಜಕಾರಣವನ್ನು ಸಮುದಾಯ ಎಂದಿಗೂ ಸಹಿಸುವುದಿಲ್ಲ. ಇದರಿಂದ ಜನರಲ್ಲಿ ಗೊಂದಲ ಸೃಷ್ಟಿಸುವ ಉದ್ದೇಶ ಸ್ಪಷ್ಟವಾಗಿದೆ. ಆದರೆ ಜಾಗೃತ ಮತದಾರರು ಇಂತಹ ಕುತಂತ್ರಗಳಿಗೆ ಮಣಿಯುವುದಿಲ್ಲ," "ಜಮೀರ್ ಅಹ್ಮದ್ ಅವರ ವಿರುದ್ಧ ಕಾಂಗ್ರೆಸ್ ಹೈಕಮಾಂಡ್ ಯಾವುದೇ ಕ್ರಮ ಕೈಗೊಂಡಲ್ಲಿ, 2ನೇಪುಟಕ್ಕೆ

## ಆರೋಗ್ಯಕರ ಜೀವನಕ್ಕೆ ಆಯುರ್ವೇದವೇ ದಾರಿದೀಪ: ಡಾ. ರೋಹಿತ್ ಅಂಗಡಿ





ಧೈರ್ಯದ ದಾರಿ

**ಸಿಂಧನೂರು:** ನಗರದ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕಾಲೇಜುಗಳ ವತಿಯಿಂದ ಪ್ರತೀ ಶನಿವಾರದಂತೆ ನಡೆಯುವ ವಿಶೇಷ ಉಪನ್ಯಾಸ ಕಾರ್ಯಕ್ರಮವು ದಿನಾಂಕ 11 ಏಪ್ರಿಲ್ ಶನಿವಾರದಂದು ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ ಯಶಸ್ವಿಯಾಗಿ ಜರುಗಿತು.ಈ ಕಾರ್ಯಕ್ರಮಕ್ಕೆ ಸಿಂಧನೂರಿನ ಅಮರೇಶ್ವರ ಆಯುರ್ವೇದ ಆಸ್ಪತ್ರೆಯ ಖ್ಯಾತ ಆಯುರ್ವೇದ ತಜ್ಞರಾದ ಡಾ. ರೋಹಿತ್ ಅಂಗಡಿ (MD . Ayu) ಅವರು ಮುಖ್ಯ ಅತಿಥಿಯಾಗಿ ಆಗಮಿಸಿ "ಪಂಚಕರ್ಮ ಹಾಗೂ ಆಯುರ್ವೇದ ದಿನಚರಿ" ಎಂಬ ಮಹತ್ವದ ವಿಷಯದ ಕುರಿತು ವಿದ್ಯಾರ್ಥಿಗಳಿಗೆ ಉಪಯುಕ್ತವಾದ ಹಾಗೂ ಮಾಹಿತಿಪೂರ್ಣ ಉಪನ್ಯಾಸ ನೀಡಿದರು.ತಮ್ಮ ಉಪನ್ಯಾಸದಲ್ಲಿ ಅವರು ಆಯುರ್ವೇದದ ಮೂಲ ತತ್ವಗಳನ್ನು ವಿವರಿಸುವುದರ ಜೊತೆಗೆ ದೈನಂದಿನ ಜೀವನದಲ್ಲಿ ಅನುಸರಿಸಬೇಕಾದ ಆಯುರ್ವೇದ ದಿನಚರಿಯ ಮಹತ್ವವನ್ನು ವಿವರಿಸಿದರು. ವಿಶೇಷವಾಗಿ ಪಂಚಕರ್ಮ ಚಿಕಿತ್ಸೆಯ ಬಗ್ಗೆ ವಿವರವಾಗಿ ತಿಳಿಸಿದ ಅವರು, ದೇಹದ ಒಳಗಿನ ವಿಷಪದಾರ್ಥಗಳನ್ನು ಹೊರಹಾಕುವ ಮೂಲಕ ದೇಹವನ್ನು ಶುದ್ಧೀಕರಿಸುವ ಅತ್ಯಂತ ಪರಿಣಾಮಕಾರಿ ವಿಧಾನವೆಂದು ಹೇಳಿದರು.
ಪಂಚಕರ್ಮದ ಉಪಯೋಗಗಳನ್ನು ವಿವರಿಸಿದ ಅವರು,
ದೇಹದ ಡಿಟಾಕ್ಸಿಫಿಕೇಶನ್ ಮೂಲಕ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ,
ದೇಹ ಮತ್ತು ಮನಸ್ಸಿಗೆ ಸಮತೋಲನ ನೀಡುತ್ತದೆ,
ಚರ್ಮದ ಆರೋಗ್ಯವನ್ನು ಸುಧಾರಿಸುತ್ತದೆ,
ಸಂಧಿವಾತ, ಬೆನ್ನುನೋವು ಹಾಗೂ ದೀರ್ಘಕಾಲದ ರೋಗಗಳಿಗೆ ಉತ್ತಮ ಪರಿಹಾರ ನೀಡುತ್ತದೆ,
ಜೀರ್ಣಕ್ರಿಯೆಯನ್ನು ಸುಧಾರಿಸಿ ದೇಹದ ಶಕ್ತಿ ಮತ್ತು ಚೈತನ್ಯವನ್ನು ಹೆಚ್ಚಿಸುತ್ತದೆ,
ಒತ್ತಡ ಮತ್ತು ಮಾನಸಿಕ ಆತಂಕವನ್ನು ಕಡಿಮೆ ಮಾಡಲು ಸಹಾಯಕವಾಗುತ್ತದೆ ಎಂದು ತಿಳಿಸಿದರು.ಇದೇ ಸಂದರ್ಭದಲ್ಲಿ ಅವರು ನರ್ಸಿಂಗ್ ವೃತ್ತಿಯ ಮಹತ್ವವನ್ನು ವಿಶೇಷವಾಗಿ ವಿವರಿಸಿ, ಆರೋಗ್ಯ ಕ್ಷೇತ್ರದಲ್ಲಿ ನರ್ಸ್‌ಗಳ ಪಾತ್ರ ಅತ್ಯಂತ ಪ್ರಮುಖವಾಗಿದೆ ಎಂದು ತಿಳಿಸಿದರು. ರೋಗಿಗಳ ಸೇವೆಯಲ್ಲಿ ನರ್ಸ್‌ಗಳ ಮಾನವೀಯತೆ, ಸಹನೆ ಹಾಗೂ ಸೇವಾಭಾವನೆ ಅತ್ಯಂತ ಅಗತ್ಯವೆಂದು ಹೇಳಿ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ಹೆಚ್ಚಿಸುವಂತೆ ಪ್ರೇರಣಾದಾಯಕ ಮಾತುಗಳನ್ನು ಹೇಳಿದರು.ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ನರ್ಸಿಂಗ್ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು, ಇಂತಹ ಉಪನ್ಯಾಸಗಳು ವಿದ್ಯಾರ್ಥಿಗಳ ಜ್ಞಾನವೃದ್ಧಿಗೆ ಸಹಕಾರಿಯಾಗಿದ್ದು, ಜೀವನದಲ್ಲಿ ಉತ್ತಮ ದಾರಿದೀಪವಾಗುತ್ತವೆ ಎಂದು ಅಭಿಪ್ರಾಯಪಟ್ಟರು.
ಡಾ. ರೋಹಿತ್ ಅಂಗಡಿ ಅವರು ಅತ್ಯಂತ ಮಹತ್ವದ ವಿಷಯವನ್ನು ಸರಳವಾಗಿ ಮತ್ತು ಪರಿಣಾಮಕಾರಿಯಾಗಿ ವಿದ್ಯಾರ್ಥಿಗಳಿಗೆ ತಲುಪಿಸಿದಕ್ಕಾಗಿ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ ಅವರ ಪರವಾಗಿ, ಎಲ್ಲಾ ಪ್ರಾಚಾರ್ಯರು ಹಾಗೂ ಉಪನ್ಯಾಸಕರ ಪರವಾಗಿ ಹೃತ್ಪೂರ್ವಕ ಧನ್ಯವಾದಗಳನ್ನು ಅರ್ಪಿಸಿರು.ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಇರ್ಷಾದ್ ಕೆ, ನರ್ಸಿಂಗ್ ಪ್ರಾಚಾರ್ಯ ಲಾಜರ ಸಿರಿಲ್ ಹಾಗೂ ಆಸಿಫ್ ಹಾಗೂ ಉಪನ್ಯಾಸಕರಾದ ರಾಜೇಶ್, ಅಶು ಪಾಷಾ, ಶೋಭಾ, ಸುಧಾ, ರಾಧಿಕಾ, ಸಂತೋಷಿ, ವೀರೇಶ್ವರಿ, ಚೈತ್ರ, ದಿಲೀಪ್, ಹರ್ಷಿತಾ, ಸುರೇಶ್ ಯಾದವ್ ಹಾಗೂ ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.ಒಟ್ಟಿನಲ್ಲಿ, ಈ ವಿಶೇಷ ಉಪನ್ಯಾಸ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಆಯುರ್ವೇದದ ಅರಿವು ಹೆಚ್ಚಿಸಿ, ಆರೋಗ್ಯ ಸೇವಾ ಕ್ಷೇತ್ರದತ್ತ ಅವರ ಆಸಕ್ತಿ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುವಲ್ಲಿ ಮಹತ್ವದ ಪಾತ್ರವಹಿಸಿದೆ.

## ಅಪ್ರೋಜ್ ಮೆಡಿಕಲ್ ವತಿಯಿಂದ ಶುದ್ಧ ಕುಡಿಯುವ ನೀರಿನ ಅರವಟಿಗೆ ಆರಂಭ



ಧೈರ್ಯದ ದಾರಿ

**ಮಾನ್ವಿ ಏ. 11:** ಪಟ್ಟಣದ ಕೋನಾಪುರ ಪೇಟೆಯ ಜಡೆ ಬಸಪ್ಪ ಗುಡಿ ಸಮೀಪ ಅಪ್ರೋಜ್ ಮೆಡಿಕಲ್ ಹಾಗೂ ಜನರಲ್ ಸ್ಟೋರ್ ವತಿಯಿಂದ ಶುದ್ಧ ಕುಡಿಯುವ ನೀರಿನ ಅರವಟಿಗೆಯನ್ನು ಉದ್ಘಾಟಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಅಪ್ರೋಜ್ ಮೆಡಿಕಲ್ ಸ್ಟೋರ್ ಮಾಲೀಕರಾದ ಅಪ್ರೋಜ್ ಅವರು, "ಬೇಸಿಗೆಯ ತಾಪಮಾನ ಹೆಚ್ಚುತ್ತಿರುವ ಹಿನ್ನೆಲೆ ಪಟ್ಟಣ ಹಾಗೂ ಗ್ರಾಮೀಣ ಭಾಗದ ಜನರಿಗೆ ಅನುಕೂಲವಾಗಲೆಂದು ನಮ್ಮ ವತಿಯಿಂದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ. ಇದು



ಸಮಾಜದ ಜನರಿಗೆ ನಮ್ಮಿಂದ ಸಣ್ಣ ಸೇವೆಯಾಗಿದೆ" ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಪಿ. ಜಯಪ್ರಕಾಶ್ (ಪುರಸಭೆ ಸದಸ್ಯರು), ರಾಮಕೃಷ್ಣ (ಪುರಸಭೆ ಸದಸ್ಯರು), ಯಾಕೋಬ್, ಎಂ.ಡಿ. ಶಾಲಂ, ಸೈಯದ್ ಮುಜೀಬ್ ಅಹಮದ್, ಮೊಹಮ್ಮದ್ ನಾಹಿದ್ ಹುಸೇನ್, ಸಂದೇಶ್ ಡ್ಯಾನಿಯಲ್, ಇಕ್ಬಾಲ್, ಶಬ್ಬೀರ್, ಶಿವಜ್ಞಾನಿ, ಸೈಯದ್ ಅಹಮದ್ ಹುಸೇನಿ ಮತವಾಲೆ, ಯೂಸುಫ್ ಸೇರಿದಂತೆ ಹಲವರು ಉಪಸ್ಥಿತರಿದ್ದರು

## ಪಿಎಲ್‌ಡಿ ಬ್ಯಾಂಕ್‌ಗೆ ಕಾಂಗ್ರೆಸ್ ಬೆಂಬಲಿತ 12 ನಿರ್ದೇಶಕರು: ಸಚಿವ ಬೋಸುರಾಜು ಸನ್ಮಾನ

ಧೈರ್ಯದ ದಾರಿ



**ಮಾನ್ವಿ :**ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಾನ್ವಿ ನಗರದ ಪ್ರವಾಸಿ ಮಂದಿರದಲ್ಲಿ ಈ ದಿನ ಪಿ ಎಲ್ ಡಿ ಬ್ಯಾಂಕಿನ ಚುನಾವಣೆಯಲ್ಲಿ 12 ಜನ ನಿರ್ದೇಶಕರು ಅವಿರುದ್ ಆಯ್ಕೆಯಾದ ನೂತನ ನಿರ್ದೇಶಕರನ್ನು ಸನ್ಮಾನಿಸಿದ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಪರಿಷತ್ತಿನ ಸಭಾ ನಾಯಕರಾದ ಶ್ರೀ ಎನ್ ಎಸ್ ಬೋಸುರಾಜು ಜೀ ಹಾಗೂ ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಜಿ ಹಂಪಯ್ಯ ನಾಯಕ್ ಸಾಹುಕಾರ್ ಇವರು.

ಈ ಸಂದರ್ಭದಲ್ಲಿ ಮಾತನಾಡಿದ ಮಾನ್ಯ ಸಚಿವರು ಮತ್ತು ಶಾಸಕರು 12 ಜನ ಸದಸ್ಯರು ಆಯ್ಕೆ ಆಗಿರುವುದರಿಂದ ಸಂಪೂರ್ಣವಾಗಿ ನಮ್ಮ ಕಾಂಗ್ರೆಸ್ ಪಕ್ಷದ ಬೆಂಬಲಿತ ನಿರ್ದೇಶಕರು ಆಯ್ಕೆ ಆಗಿರುವುದರಿಂದ ಮುಂದಿನ ದಿನಮಾನಗಳಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ಆಯ್ಕೆ ಮಾಡಲಾಗುವುದು ಪಕ್ಷ ಯಾರನ್ನು ಮಾಡಿದರು ಸಹ ಅದನ್ನು ಪಕ್ಷದ ಎಲ್ಲಾ ಸದಸ್ಯರು ಸ್ವೀಕಾರ ಮಾಡಬೇಕು ಅವರಿಗೆ ಸಂಪೂರ್ಣವಾದ ಆಡಳಿತ ಮಾಡಲು ತಮ್ಮ ಬೆಂಬಲವನ್ನು ನೀಡಬೇಕು ಎಂದು ಸಚಿವರು ಮತ್ತು ಶಾಸಕರು ಈ ಸಂದರ್ಭದಲ್ಲಿ ನಿರ್ದೇಶಿಕರಿಗೆ ಸೂಚಿಸಿದರು ಬ್ಯಾಂಕಿನಿಂದ ಸಿಗುವ ಸೌಲಭ್ಯಗಳನ್ನು ರೈತರಿಗೆ ಸರಿಯಾದ ಸಮಯಕ್ಕೆ ತಲುಪಿಸಿ ಬ್ಯಾಂಕ್ ಅನ್ನು ಆದಾಯ ಬರುವ ರೀತಿಯಲ್ಲಿ ಕಾರ್ಯ ನಿರ್ವಹಿಸಲು ಸಲಹೆಯನ್ನು ನೀಡಿದರು.

ಈ ಸಂದರ್ಭದಲ್ಲಿ ರುದ್ರಪ್ಪ ಅಂಗಡಿ ಮಾಜಿನಗರ ಸಭಾ ಸದಸ್ಯರ ರಾಯಚೂರು, ಅಬ್ದುಲ್ ಗಫರ್ ಸಾಬ್ ಅಧ್ಯಕ್ಷರು ಬ್ಲಾಕ್ ಕಾಂಗ್ರೆಸ್ ಸಮಿತಿ ಹಾಗೂ ನಗರ ಯೋಜನಾ ಪ್ರಾಧಿಕಾರ ಮಾನ್ವಿ, ಅಮರೇ ಗೌಡ ಹಂಚಿನಾಳ್, ಪಂಚ ಗ್ಯಾರೆಂಟಿಗಳ ಸಮಿತಿಯ ಅಧ್ಯಕ್ಷರಾದ ಬಿಕೆ ಅಂರೇಶಪ್ಪ ವಕೀಲರು, ಶಾಸಕರ ಸುಪುತ್ರ ಮಾಜಿ ಎಪಿಎಂಸಿ ನಿರ್ದೇಶಕರಾದ ಶಿವರಾಜ್ ನಾಯಕ್ ವಕೀಲರು, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಕಿರಲಿಂಗಪ್ಪ ಕವಿತಾಳ,ರೌಡ್ರು ಮಹಾಂತೇಶ್ ಸ್ವಾಮಿ,ಗುಡದಿನ್ನಿ ಶರಣಯ್ಯ ನಾಯಕ್, ಸೈಯದ್ ನಜರುದ್ದೀನ್ ಖಾದ್ರಿ,ಈ ಚುನಾವಣೆಯಲ್ಲಿ ವಿಜೇತರಾದ ಬಸವರಾಜಪ್ಪ ಗೌಡ ಕತರಿಕಿ, ಸಿದ್ದರಾಮಪ್ಪ ಸಾಹುಕಾರ್, ಗಣೇಶ್, ಶ್ರೀಮತಿ ರಜಿ ನಮ್ಮ ಸುಂದರ್ ಕಪಗಲ್, ಯಾರಿಸ್ವಾಮಿ, ಶ್ರೀಮತಿ ರೇಣುಕಾ ಚನ್ನಪ್ಪ, ಶ್ರೀಮತಿ ರಫಿಯಾ ಬೇಗಂ, ಶಿವಶಂಕರ್ ಗೌಡ, ಶಿವರಾಜ್, ಶ್ರೀಮತಿ ಜಯಶ್ರೀ ಗಂಡ ಹನುಮಂತ, ಸಯ್ಯದ್ ಮುಸ್ತಫ, ರಾಜೇಶ್ ಕವಿತಾಳ, ಮೌನೇಶ್ ನಾಯಕ್ ಕವಿತಾಳ ಸತ್ತಾರ್ ಬಂಗ್ಲೆವಲೇ ಇನ್ನು ಮುಂತಾದವರು ಉಪಸ್ಥಿತರಿದ್ದರು,

## ವಿರೂಪಾಕ್ಷಯ್ಯ ಸ್ವಾಮಿ ಸಾಲಿಮಠ ಅಂತರಗಂಗೆ. ಇಂಟರ್‌ನ್ಯಾಷನಲ್ ಪತ್ರಿಕೋದ್ಯಮ" ಶ್ರೀ ರವಿ ಬೆಳಗೆರೆ ಪ್ರಶಸ್ತಿಗೆ ಆಯ್ಕೆ

ಧೈರ್ಯದ ದಾರಿ

**ಮಸ್ಕಿ :** ವಿರೂಪಾಕ್ಷಯ್ಯ ಸ್ವಾಮಿ ಸಾಲಿಮಠ, ಅಂತರಗಂಗೆರವರು ಪತ್ರಿಕೋದ್ಯಮದಲ್ಲಿ ಸಲ್ಲಿಸಿರುವ ಸೇವೆಯನ್ನು ಗಮನಿಸಿ ಇವರಿಗೆ ಗೀತ ಗಾಯನ ಸಮೂಹದ 5ನೇ ವಾರ್ಷಿಕೋತ್ಸವ – 2026 ರ ಮತ್ತು ಸಾಂಸ್ಕೃತಿಕ ವೇದಿಕೆ 50ನೇ ಸಂಭ್ರಮ ಕಾರ್ಯಕ್ರಮದ ಸಂಯುಕ್ತ ಆಶ್ರಯದಲ್ಲಿ ದಿನಾಂಕ 12–04–2026 ರಂದು "ಜ್ಞಾನವಿಕಾಸ ಗುರುಕುಲ" ದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು ವಿರೂಪಾಕ್ಷಯ್ಯ ಸ್ವಾಮಿ ಸಾಲಿಮಠ ಅಂತರಗಂಗೆ ಯವರ ಪತ್ರಿಕೋದ್ಯಮ ಸೇವೆ ಇತರರಿಗೆ ಮಾದರಿ ಹಾಗೂ ಸ್ಫೂರ್ತಿಯಾಗಲೆಂದು ಮತ್ತು ತಾಯಿ ಭುವನೇಶ್ವರಿಯ ಆಶೀರ್ವಾದ ಸದಾ ಅವರ ಮೇಲೆ ಇರಲೆಂದು ಬಯಸುತ್ತ ಈ ಪ್ರಶಸ್ತಿಯನ್ನು ನೀಡಲಾಗುತ್ತಿದೆ .



ಮೊದಲನೇ ಪುಟದಿಂದ

# ಊಹಾ ಪತ್ರಿಕೋದ್ಯಮ ಅತ್ಯಂತ ಅಪಾಯಕಾರಿ : ಸಿಎಂ ಸಿದ್ದರಾಮಯ್ಯ

ದೇವಪ್ಪ, ಸಮ್ಮೇಳನದ ಪ್ರಧಾನ ಭಾಷಣಕಾರರಾಗಿರುವ ಹಿರಿಯ ಸಂಪಾದಕರಾದ ವಿಶ್ವೇಶ್ವರ ಭಟ್, ಸಂಸದರಾದ ಸಾಗರ್ ಖಂಡ್ರೆ, ಮಾಜಿ ಸಚಿವರಾದ ರಾಜಶೇಖರ್ ಪಾಟೀಲ್, ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಸೋಮಣ್ಣ ಬೇವಿನಮರದ್ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

ಹಾರಕುಡ ಹಿರೇಮಠ ಸಂಸ್ಥಾನದ ಡಾ.ಚನ್ನವೀರ ಶಿವಾಚಾರ್ಯರು, ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ಡಾ.ಬಸವಲಿಂಗ ಪಟ್ಟದೇವರು ಇವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪತ್ರಕರ್ತರ ಸಂಘದ ರಾಜ್ಯ ಮತ್ತು ಜಿಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಉಚಿತ ಬಸ್ ಪಾಸ್: ನಿಯಮಗಳ ತೊಂದರೆ ನಿವಾರಣೆ: ಸಿಎಂ
ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡುವ ಸವಲತ್ತನ್ನು ಜಾರಿ ಮಾಡಿದ್ದೇ ನಾನು. ಇದರಲ್ಲಿನ ನಿಯಮಗಳಲ್ಲಿ ತೊಂದರೆ ಇದ್ದರೆ, ಆ ಬಗ್ಗೆ ಚರ್ಚಿಸಿ ನಿವಾರಣೆಗೊಳಿಸಲಾಗುವುದು ಎಂದರು.

# ಜಮೀರ್ ಅಹ್ಮದ್ ವಿರುದ್ಧ ಅಸತ್ಯ ಪ್ರಚಾರ , ಬನ್ನೇಟ್ಟಿ ಆಕ್ರೋಶ

ಸಮುದಾಯದ ಪರವಾಗಿ ತಕ್ಕ ಪಾಠ ಕಲಿಸಲು ನಾವು ಹಿಂಜರಿಯುವುದಿಲ್ಲ," ಎಂದು ತೀವ್ರವಾಗಿ ಪ್ರತಿಕ್ರಿಯಿಸಿದರು.

ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕಿದ್ದು, ಸಮುದಾಯದ ಭಾವನೆಗಳನ್ನು ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ತಕ್ಕ ಉತ್ತರ ನೀಡಲಾಗುವುದು ಎಂದು ಬನ್ನೇಟ್ಟಿ ಸ್ಪಷ್ಟಪಡಿಸಿದರು.

# ನಮ್ಮ ಮಾನವಿ ಕಾಲೇಜಿನ ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ







ಧೈರ್ಯದ ದಾರಿ

**ಮಾನ್ವಿ, ಏ.11:** 2025-26ನೇ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶದಲ್ಲಿ ಮಾನ್ವಿ ತಾಲೂಕಿನ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿ ತಾಲೂಕಿಗೆ ಕೀರ್ತಿ ತಂದಿದ್ದಾರೆ.

ಕು. ಅನಿತಾ ಅವರು 600ರಲ್ಲಿ 564 ಅಂಕಗಳನ್ನು ಗಳಿಸಿ ತಾಲೂಕಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ಅದೇ ರೀತಿ ಕು. ಶಿವನಾಗಮ್ಮ 554 ಅಂಕಗಳು ಮತ್ತು ಕು. ಭಾಗ್ಯಲಕ್ಷ್ಮಿ 544 ಅಂಕಗಳನ್ನು ಪಡೆದು ಉತ್ತಮ ಸಾಧನೆ ಮಾಡಿದ್ದಾರೆ. ಇವರ ಸಾಧನೆಗೆ ಶಿಕ್ಷಣ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಹೆಚ್. ಮೌನೇಶಗೌಡ ಸಂತಸ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ. ಪ್ರಾಂಶುಪಾಲರು ಹಾಗೂ ಉಪನ್ಯಾಸಕರು ವಿದ್ಯಾರ್ಥಿಗಳ ಪರಿಶ್ರಮವನ್ನು ಪ್ರಶಂಸಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಸಾಧನೆ ಮಾಡಲು ಹಾರೈಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಸಿಬ್ಬಂದಿ ಹಾಗೂ ಪೋಷಕರು ಸಹ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದರು.

# ರಾಯಚೂರು ನಗರದ AIMIM ಪಕ್ಷದ ಘಟಕದ ಅಧ್ಯಕ್ಷರಾಗಿ ಶಬ್ಬೀರ್ ಅಹಮದ್ ಹೌದಡಿ ನೇಮಕ

ಧೈರ್ಯದ ದಾರಿ



**ರಾಯಚೂರು ಎ 11 :** ಗುಲ್ಬರ್ಗದ AIMIM ಪಕ್ಷದ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಯಚೂರು ನಗರ ಘಟಕದ ಅಧ್ಯಕ್ಷರಾಗಿ ಶಬ್ಬೀರ್ ಅಹಮದ್ ಹೌದಡಿ ಅವರನ್ನು ಅಧಿಕೃತವಾಗಿ ನೇಮಕ ಮಾಡಲಾಗಿದೆ.

ಈ ನೇಮಕಾತಿ ಆದೇಶವನ್ನು Asaduddin Owaisi ಅವರ ಮಾರ್ಗದರ್ಶನದಲ್ಲಿ, Kausar Mohiuddin AIMIM ಪಕ್ಷದ ಕಾರ್ವನ್ ಶಾಸಕರು ಹೈದರಾಬಾದ್ ಅವರು ನೀಡಿದರು.

ಈ ಸಂದರ್ಭದಲ್ಲಿ ಹೈದರಾಬಾದ್‌ನ ಮಾಜಿ ಕಾರ್ಪೊರೇಟರ್ ಮೊಹಮ್ಮದ್ ಸಲೀಂ, ಕರ್ನಾಟಕ AIMIM ಪಕ್ಷದ ರಾಜ್ಯಾಧ್ಯಕ್ಷ Latif Khan Pathan, ಶಬಾಜ್ ಖಾನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.
ರಾಯಚೂರು ನಗರ ಘಟಕದ ಂಋಒಋಒ ಪಕ್ಷದ ಅಧ್ಯಕ್ಷರಾಗಿ ಅಧ್ಯಕ್ಷ ಸ್ಥಾನವನ್ನು ಸ್ವೀಕರಿಸಿದ ನಂತರ ಮಾತನಾಡಿದ ಶಬ್ಬೀರ್ ಅಹಮದ್ ಅವರು,
ನಗರದಲ್ಲಿ ಸಂಘಟನೆಯನ್ನು ಬಲಪಡಿಸುವುದು ತಮ್ಮ ಮೊದಲ ಗುರಿಯಾಗಿದೆ ಎಂದು ತಿಳಿಸಿದರು.
ಪ್ರತಿ ವಾರ್ಡ್‌ನಲ್ಲಿ ಘಟಕಗಳನ್ನು ರಚಿಸಿ, ಜನರ ಸಮಸ್ಯೆಗಳಿಗೆ ಸ್ಪಂದಿಸುವುದು, ಜನರ ಪರ ಹೋರಾಟ ನಡೆಸುವುದು ಮತ್ತು ಸಂವಿಧಾನದ ಅರಿವು ಮೂಡಿಸುವ ಕೆಲಸಗಳಿಗೆ ಒತ್ತು ನೀಡಲಾಗುವುದು ಎಂದು ಹೇಳಿದರು.

ಮುಂದಿನ 2028ರ ಚುನಾವಣೆಯಲ್ಲಿ ರಾಯಚೂರು ನಗರದಿಂದ AIMIM ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವುದು ನಮ್ಮ ಮುಖ್ಯ ಉದ್ದೇಶ ಎಂದು ಅವರು ತಿಳಿಸಿದರು.

# ಹಂಚಿನಾಳ ಕ್ಯಾಂಪ್ ನಲ್ಲಿ ಸಹಕಾರ ಸಂಘದ ಸಹಯೋಗದಲ್ಲಿ ನೂತನ ಜೋಳ ಖರೀದಿ ಕೇಂದ್ರ ಪ್ರಾರಂಭ



ಧೈರ್ಯದ ದಾರಿ

**ಸಿಂಧನೂರು :** ಕರ್ನಾಟಕ ಸರ್ಕಾರವು ರೈತರಿಂದ ಬೆಂಬಲ ಬೆಲೆಯಲ್ಲಿ (M S P) ಮುಂಗಾರು ಮತ್ತು ಹಿಂಗಾರು ಜೋಳ/ಮೆಕ್ಕೆಜೋಳವನ್ನು ಖರೀದಿಸಲು ರಾಜ್ಯದ ವಿವಿಧ ಎಪಿಎಂಸಿ (A P M C) ಮಾರುಕಟ್ಟೆಗಳಲ್ಲಿ ಖರೀದಿ ಕೇಂದ್ರಗಳನ್ನು ಆರಂಭಿಸಿದ್ದು. ಕೆಎಂಎಫ್ (K M F ) ಮೂಲಕ ರೈತರಿಂದ ನೇರವಾಗಿ ಪ್ರತಿ ಕ್ವಿಂಟಾಲ್‌ಗೆ ಬೆಂಬಲ ಬೆಲೆ (ಉದಾಹರಣೆಗೆ 2,400-3,000) ನಿಗದಿಪಡಿಸಿ, ಒಬ್ಬ ರೈತರಿಂದ ಗರಿಷ್ಠ 20-25 ಕ್ವಿಂಟಾಲ್ ವರೆಗೆ ಖರೀದಿ ಮಾಡಲಾಗುತ್ತದೆ.ಈ ಹಿನ್ನೆಲೆಯಲ್ಲಿ ಸಿಂಧನೂರು ತಾಲೂಕಿನ ಹಂಚಿನಾಳ ಕ್ಯಾಂಪ್ ನ ಸಹಕಾರ ಸಂಘದ ವತಿಯಿಂದ ಇಂದು ಶುಕ್ರವಾರ ನೂತನ ಜೋಳ ಖರೀದಿ ಕೇಂದ್ರವನ್ನು ಜೋಳ ಖರೀದಿಸುವ ಮೂಲಕ ಜೋಳದ ರಾಶಿಗೆ ಪೂಜೆ ಸಲ್ಲಿಸಿ ಪ್ರಾರಂಭಿಸಲಾಯಿತು.
ಗದಗ, ಲಕ್ಷ್ಮೇಶ್ವರ, ಮುಂಡರಗಿ, ನರಗುಂದ, ರೋಣ ಮುಂತಾದ ಎಪಿಎಂಸಿ ಪ್ರಾಂಗಣಗಳಲ್ಲಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.
ಪ್ರಕ್ರಿಯೆ: ಆಯಾ ಜಿಲ್ಲೆಯ A P M C ಅಥವಾ ಕೃಷಿ ಇಲಾಖೆ ಕಚೇರಿಯಲ್ಲಿ ನೋಂದಣಿ ಮಾಡಿಕೊಳ್ಳಬೇಕು.
ಅಗತ್ಯ ದಾಖಲೆಗಳು: ಪಹಣಿ (R T C), ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಮತ್ತು ಬೆಳೆ ದೃಢೀಕರಣ ಪತ್ರ.
ಉದ್ದೇಶ: ಮಾರುಕಟ್ಟೆಯಲ್ಲಿ ಬೆಲೆ ಕುಸಿದಾಗ ರೈತರಿಗೆ ಬೆಂಬಲ ಬೆಲೆ ಒದಗಿಸಿ ನಷ್ಟ ತಪ್ಪಿಸುವುದು.
ರೈತರು ಹತ್ತಿರದ ಎಪಿಎಂಸಿ ಕೇಂದ್ರ ಅಥವಾ ಕೃಷಿ ಇಲಾಖೆಯನ್ನು ಸಂಪರ್ಕಿಸಿ ನಿಖರವಾದ ದರ ಮತ್ತು ನೋಂದಣಿ ದಿನಾಂಕದ ಬಗ್ಗೆ ಮಾಹಿತಿ ಪಡೆಯಬಹುದಾಗಿದೆ.

ಈ ಸಂದರ್ಭದಲ್ಲಿ ಶ್ರೀ ಶಂಬಣ್ಣ ಸಾಹುಕಾರ್, ಸೂಗೂರು ವೀರೇಶಪ್ಪ,ಉಪ ತಹಶೀಲ್ದಾರರು, ಕೃಷಿ ಅಧಿಕಾರಿಗಳು, ಸಂಘದ ಅಧ್ಯಕ್ಷರಾದ ಶೇಖರಗೌಡ ಸೇರಿದಂತೆ ನಿರ್ದೇಶಕರು ರೈತರು, ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು

# ಡಿಎಂಕೆ-ಕಾಂಗ್ರೆಸ್ ಮೈತ್ರಿ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸೋಣ ಸಂಸದ ಜಿ ಕುಮಾರ ನಾಯಕ

ಧೈರ್ಯದ ದಾರಿ



**ಚೆನ್ನೈ/ರಾಯಚೂರು:** ತಮಿಳುನಾಡು ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಇಂದು ರಾಜ್ಯದ ವಿಧಾನಸಭಾ ಕ್ಷೇತ್ರಗಳ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಏರ್ಪಡಿಸಿದ್ದ ಮಹತ್ವದ ಪೂರ್ವಭಾವಿ ಸಭೆಯಲ್ಲಿ ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಜಿ ಕುಮಾರ ನಾಯಕ ರವರು ಸಭೆಯಲ್ಲಿ ಭಾಗವಹಿಸಿ ಮೈತ್ರಿ ಅಭ್ಯರ್ಥಿಗಳ ಗೆಲುವಿಗೆ ಪಕ್ಷದ ಎಲ್ಲಾ ಕಾರ್ಯಕರ್ತರು ಹಾಗೂ ಮುಖಂಡರು ಶ್ರಮಿಸೋಣ ಚುನಾವಣೆಯ ಪ್ರಣಾಳಿಕೆಯ ಅಂಶಗಳನ್ನು ಮತದಾರರ ಮನೆ ಮನೆಗೆ ಭೇಟಿ ನೀಡಿ ಮನವರಿಕೆ ಮಾಡಿ ಪಕ್ಷದ ಅಭ್ಯರ್ಥಿಗಳನ್ನು ಜಯಗಳಿಸೋಣ ಎಂದು ಮಾತನಾಡಿದರು ಈ ಸಭೆಯಲ್ಲಿ ಡಿಎಂಕೆ-ಕಾಂಗ್ರೆಸ್ ಮೈತ್ರಿ ಅಭ್ಯರ್ಥಿಗಳ ಭರ್ಜರಿ ಗೆಲುವಿಗಾಗಿ ಸಮಗ್ರ ರಣತಂತ್ರ ರೂಪಿಸುವ ಕುರಿತು ಸುದೀರ್ಘ ಚರ್ಚಿಸಿದರು,ಸಭೆಯಲ್ಲಿ ತಮಿಳುನಾಡು ಕಾಂಗ್ರೆಸ್ ಕಮಿಟಿ ಅಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಶ್ರೀ ಕೆ. ಸೆಲ್ವಪೆರುಂಥಗ್ಯೆ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮೈತ್ರಿ ಪಕ್ಷಗಳ ನಡುವಿನ ಸಂಘಟನಾ ಬಲವನ್ನು ಮತ್ತಷ್ಟು ಗಟ್ಟಿಗೊಳಿಸಿ, ತಳಮಟ್ಟದ ಕಾರ್ಯಕರ್ತರೊಂದಿಗೆ ನೇರ ಸಂಪರ್ಕ ಸಾಧಿಸುವ ಮೂಲಕ ಜನರ ವಿಶ್ವಾಸ ಗಳಿಸುವುದು ಅತ್ಯಗತ್ಯ ಎಂದು ಹೇಳಿದರು.

ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಮುಕುಲ್ ವಾಸ್ನಿಕ್ ಅವರು, ತಮಿಳುನಾಡಿನಲ್ಲಿ ಕಾಂಗ್ರೆಸ್ ಪಕ್ಷದ ಸಾಂಪ್ರದಾಯಿಕ ಬಲವನ್ನು ಮತ್ತಷ್ಟು ವೃದ್ಧಿಸಲು, ಯುವಜನತೆ ಹಾಗೂ ಮಹಿಳಾ ಮತದಾರರನ್ನು ಸೆಳೆಯುವ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಸೂಚಿಸಿದರು.
ಎಐಸಿಸಿ ಚುನಾವಣಾ ಉಸ್ತುವಾರಿಗಳಾದ ಶ್ರೀ ಗಿರೀಶ್ ಚಂದ್ವಾಕರ್ ಹಾಗೂ ಕಾರ್ಯದರ್ಶಿಗಳಾದ ಶ್ರೀ ಸೂರಜ್ ಹೆಗಡೆ ಅವರು, ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಬೂತ್ ಮಟ್ಟದ ಸಂಘಟನೆಯನ್ನು ಬಲಪಡಿಸುವುದು, ಡಿಜಿಟಲ್ ಪ್ರಚಾರವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವುದು ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಮತದಾರರೊಂದಿಗೆ ಸಂಪರ್ಕ ಹೆಚ್ಚಿಸುವ ಬಗ್ಗೆ ಮಾರ್ಗದರ್ಶನ ನೀಡಿದರು.ಸಭೆಯಲ್ಲಿ ಭಾಗವಹಿಸಿದ ಕರ್ನಾಟಕದ ಸಚಿವರಾದ ಶ್ರೀ ಕೆ.ಹೆಚ್. ಮುನಿಯಪ್ಪ ಮತ್ತು ಡಾ. ಸುಧಾಕರ್ ಅವರು, ತಮ್ಮ ರಾಜ್ಯದ ಚುನಾವಣಾ ಅನುಭವಗಳನ್ನು ಹಂಚಿಕೊಂಡು, ಮೈತ್ರಿ ಪಕ್ಷಗಳ ನಡುವೆ ಸಮನ್ವಯತೆ ಹಾಗೂ ಶಿಸ್ತಿನ ಪ್ರಚಾರವೇ ಜಯದ ಕೀಲಿಕೈ ಎಂದು ಹೇಳಿದರು. ಕೆಪಿಸಿಸಿ ಕಾರ್ಯಧ್ಯಕ್ಷರಾದ ಶ್ರೀ ಎ ವಸಂತ್ ಕುಮಾರರವರು ಶಾಸಕರಾದ ಶ್ರೀ ಅಜಯ್ ಸಿಂಗ್, ಶ್ರೀ ಪ್ರಿಯಾ ಕೃಷ್ಣ ಹಾಗೂ ಡಾ. ಮಂತರ್ ಗೌಡ ಅವರು ಸಹ ಕಾರ್ಯಕರ್ತರ ಉತ್ಸಾಹ ಹೆಚ್ಚಿಸಲು ಸಮಗ್ರ ಯೋಜನೆಗಳನ್ನು ಅನುಸರಿಸುವ ಅಗತ್ಯವನ್ನು ಒತ್ತಿ ಹೇಳಿದರು.

ಈ ಸಂದರ್ಭದಲ್ಲಿ ಪ್ರಮುಖವಾಗಿ ಕೆಳಗಿನ ಅಂಶಗಳ ಕುರಿತು ನಿರ್ಧಾರ ಕೈಗೊಳ್ಳಲಾಯಿತು:
1) ಪ್ರತಿ ಕ್ಷೇತ್ರದಲ್ಲಿ ಬೂತ್ ಮಟ್ಟದ ಸಮಿತಿಗಳನ್ನು ಪುನರ್‌ವ್ಯವಸ್ಥೆಗೊಳಿಸಿ ಕಾರ್ಯಕ್ಷಮಗೊಳಿಸುವುದು.
2) ಮನೆ ಮನೆಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸುವ ಅಭಿಯಾನ ಆರಂಭಿಸುವುದು.
3)ಯುವಕರು ಮತ್ತು ಮಹಿಳೆಯರನ್ನು ಸೆಳೆಯುವ ವಿಶೇಷ ಪ್ರಚಾರ ಕಾರ್ಯಕ್ರಮಗಳನ್ನು ರೂಪಿಸುವುದು.
4)ಡಿಎಂಕೆ-ಕಾಂಗ್ರೆಸ್ ಮೈತ್ರಿ ಸಂದೇಶವನ್ನು ಸಮನ್ವಯದಿಂದ ಜನರಿಗೆ ತಲುಪಿಸುವುದು
ಸಾಮಾಜಿಕ ಜಾಲತಾಣಗಳಲ್ಲಿ ಸಂಘಟಿತ ಮತ್ತು ಪರಿಣಾಮಕಾರಿ ಪ್ರಚಾರ ನಡೆಸುವುದು.ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ಲೋಕಸಭಾ ಸದಸ್ಯರು, ಶಾಸಕರು, ಹಿರಿಯ ನಾಯಕರು ಹಾಗೂ ಅಭ್ಯರ್ಥಿಗಳು ಉಪಸ್ಥಿತರಿದ್ದು, ಏಕಮತದಿಂದ ಮೈತ್ರಿ ಅಭ್ಯರ್ಥಿಗಳ ಗೆಲುವಿಗಾಗಿ ಶ್ರಮಿಸುವ ಸಂಕಲ್ಪ ವ್ಯಕ್ತಪಡಿಸಿದರು.
ಈ ಸಭೆ ತಮಿಳುನಾಡಿನ ರಾಜಕೀಯದಲ್ಲಿ ಮೈತ್ರಿ ಪಕ್ಷಗಳ ಶಕ್ತಿಯನ್ನು ಮತ್ತಷ್ಟು ಬಲಪಡಿಸುವ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿದೆ...

# ಎಸ್‌ಎಂವಿಓ ಪಿಯು ಕಾಲೇಜಿನ ವಿದ್ಯಾರ್ಥಿಗಳ ಉತ್ತಮ ಸಾಧನೆಗೆ ಮೆಚ್ಚುಗೆ



ಕಲಾ
ಅಂಬಿಕಾ/ಬಂಡಯ್ಯ
529(88.16%)



ಕಲಾ
ಜೆ. ರಾಮನಗೌಡ/ಜೆ. ಸಂಗಣ್ಣ
507(84.5%)



ಕಲಾ
ಶಿವಲಿಂಗಮ್ಮ/ಬೀರಪ್ಪ
501(83.5%)



ವಾಣಿಜ್ಯ
ಶ್ರೀದೇವಿ/ಯಂಕೋಬ
504(84%)



ವಾಣಿಜ್ಯ
ಶೃತಿ/ಜಯಪ್ರಭು
474(79%)



ವಾಣಿಜ್ಯ
ಸೌಮ್ಯಲತಾ/ಚಿನ್ನಪ್ಪ
466(77.76%)

ಧೈರ್ಯದ ದಾರಿ

**ಮಾನ್ವಿ, ಏ.11:** ಪಟ್ಟಣದ ಎಸ್‌ಎಂವಿಓ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು 2025-26ನೇ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ವಿದ್ಯಾರ್ಥಿಗಳ ಪರಿಶ್ರಮ, ಶಿಕ್ಷಕರ ಮಾರ್ಗದರ್ಶನ ಹಾಗೂ ಪೋಷಕರ ಬೆಂಬಲದಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ತಿಳಿದುಬಂದಿದೆ.

ಈ ವರ್ಷದ ಫಲಿತಾಂಶದಲ್ಲಿ ಕಾಲೇಜಿನ ಹಲವು ವಿದ್ಯಾರ್ಥಿಗಳು ಉನ್ನತ ಅಂಕಗಳನ್ನು ಗಳಿಸಿ ಗಮನಸೆಳೆದಿದ್ದು, ಶಿಕ್ಷಣ ವಲಯದಲ್ಲಿ ಪ್ರಶಂಸೆಗೆ ಪಾತ್ರರಾಗಿದ್ದಾರೆ. ವಿದ್ಯಾರ್ಥಿಗಳ ನಿರಂತರ ಅಭ್ಯಾಸ, ಶಿಸ್ತು ಮತ್ತು ಸಮಯಪಾಲನೆ ಯಶಸ್ಸಿನ ಮೂಲ ಕಾರಣಗಳಾಗಿವೆ ಎಂದು ಕಾಲೇಜು ವಲಯದಲ್ಲಿ ಅಭಿಪ್ರಾಯ ವ್ಯಕ್ತವಾಗಿದೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶ್ರೀ ವೆಂಕಟೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಮಹಾಂತೇಶ್ ಓಲೇಕಾರ್ ಸಂತಸ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ. ವಿದ್ಯಾರ್ಥಿಗಳ ಶ್ರಮ ಮತ್ತು ಶಿಕ್ಷಕರ ಸಮರ್ಪಿತ ಬೋಧನೆ ಈ ಫಲಿತಾಂಶಕ್ಕೆ ಕಾರಣವಾಗಿದೆ ಎಂದು ಅವರು ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಸಾಧನೆ ಮಾಡಲು ವಿದ್ಯಾರ್ಥಿಗಳು ಪ್ರಯತ್ನಿಸಬೇಕು ಎಂದು ಅವರು ಹಾರೈಸಿದರು.

ಕಾಲೇಜಿನ ಪ್ರಾಂಶುಪಾಲರಾದ ಶ್ರೀದೇವಿ ಅವರು ಮಾತನಾಡಿ, ವಿದ್ಯಾರ್ಥಿಗಳ ಏಕಾಗ್ರತೆ ಮತ್ತು ಶಿಕ್ಷಕರ ಮಾರ್ಗದರ್ಶನದಿಂದ ಉತ್ತಮ ಫಲಿತಾಂಶ ದೊರೆತಿದೆ ಎಂದು ಹೇಳಿದರು. ಶಿಕ್ಷಣದ ಜೊತೆಗೆ ನೈತಿಕ ಮೌಲ್ಯಗಳೂ ಕೂಡ ವಿದ್ಯಾರ್ಥಿಗಳ ಜೀವನದಲ್ಲಿ ಪ್ರಮುಖವಾಗಿವೆ ಎಂದು ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗವು ವಿದ್ಯಾರ್ಥಿಗಳನ್ನು ಅಭಿನಂದಿಸಿ, ಅವರ ಭವಿಷ್ಯ ಉಜ್ವಲವಾಗಿರಲಿ ಎಂದು ಹಾರೈಸಿದರು. ಪೋಷಕರೂ ಸಹ ಕಾಲೇಜಿನ ಶೈಕ್ಷಣಿಕ ಗುಣಮಟ್ಟವನ್ನು ಮೆಚ್ಚಿಕೊಂಡು ಸಂತಸ ವ್ಯಕ್ತಪಡಿಸಿದರು.

ಒಟ್ಟಾರೆ, ಎಸ್‌ಎಂವಿಓ ಪದವಿ ಪೂರ್ವ ಕಾಲೇಜಿನ ಈ ವರ್ಷದ ಫಲಿತಾಂಶವು ಶಿಕ್ಷಣ ಕ್ಷೇತ್ರದಲ್ಲಿ ಮತ್ತೊಂದು ಮೈಲುಗಲ್ಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಸಾಧನೆ ಮಾಡುವ ವಿಶ್ವಾಸ ಮೂಡಿಸಿದೆ.

# ಬೇಸಿಗೆ: ನೀರು ನಿರ್ವಹಣೆಯಲ್ಲಿ ನಿರ್ಲಕ್ಷ್ಯ ಸಲ್ಲದು: ಸಚಿವ ಎಂ. ಬಿ. ಪಾಟೀಲ



**ವಿಜಯಪುರ, ಏ.11:** ಜಿಲ್ಲೆಯಲ್ಲಿ ಸದ್ಯಕ್ಕೆ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿಲ್ಲ. ಇಂಡಿ ಹಾಗೂ ಚಡಚಣ ಭಾಗದಲ್ಲಿ ನೀರಿನ ಸಮಸ್ಯೆ ತಲೆದೋರಬಹುದು. ಗ್ರಾಪಂ ಮಟ್ಟದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ಕುಡಿಯುವ ನೀರಿನ ನಿರ್ವಹಣೆ ಕುರಿತ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೇಸಿಗೆ ಸಂದರ್ಭದಲ್ಲಿ ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು. ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಸಮಸ್ಯೆಗಳಿದ್ದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲೂಕು ಕೇಂದ್ರಗಳಿಗೆ ತಕ್ಷಣ ತೆರಳಿ ಸಭೆ ನಡೆಸಿ ನಿಮ್ಮ ನಿಮ್ಮ ಹಂತದಲ್ಲಿ ಸಮಸ್ಯೆ ಬಗೆಹರಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಇಂಡಿ ಸೇರಿದಂತೆ ಎಲ್ಲೆಲ್ಲಿ ನೀರಿನ ಸಮಸ್ಯೆ ಉದ್ಭವಿಸಿದಲ್ಲಿ ತಕ್ಷಣವೇ ಪರ್ಯಾಯ ವ್ಯವಸ್ಥೆಗಳನ್ನು ಕೈಗೆತ್ತಿಕೊಂಡು ಯಾವುದೇ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ನೋಡಿಕೊಳ್ಳುವುದರತ್ತ ನಿಗಾ ವಹಿಸಬೇಕು. ಸಾಧ್ಯವಾದರೆ ಬೋರವೆಲ್ ನಂತಹ ಜಲಮೂಲಗಳನ್ನು ಗುರುತಿಸಿಟ್ಟುಕೊಳ್ಳಬೇಕು. ಬೇಸಿಗೆ ಸಂದರ್ಭದಲ್ಲಿ ಜನ-ಜಾನುವಾರುಗಳಿಗೆ ಯಾವುದೇ ಕಾರಣಕ್ಕೂ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಜಿಲ್ಲಾಡಳಿತ ಸದಾ ಸನ್ನದ್ಧವಾಗಿರಬೇಕು ಎಂದರು.

ಜಿಲ್ಲಾ ಉಸ್ತುವಾರಿ ಸಚಿವರು ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಿದರು.

ಮುಂದಿನ ಇಪ್ಪತ್ತು ದಿನಗಳವರೆಗೆ ನೀರು ಬಿಡುಗಡೆ ಸಂದರ್ಭದಲ್ಲಿ ಸಣ್ಣ ನೀರಾವರಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳೊಂದಿಗೆ ಸಮನ್ವಯತೆ ಸಾಧಿಸಲು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಭೆ ನಡೆಸಿ, ಬೇಸಿಗೆಯಲ್ಲಿ ನೀರಿನ ಸಮಸ್ಯೆ ಉಲ್ಬಣಗೊಳ್ಳದಂತೆ ನೋಡಿಕೊಳ್ಳಬೇಕು ಎಂದರು.

ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಮಾತನಾಡಿ, ಜಿಲ್ಲೆಯ ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯದಲ್ಲಿ ಕಳೆದ ವರ್ಷ ಇದ್ದ ನೀರಿನ ಲಭ್ಯತೆ ಎರಡೂ ಜಲಾಶಯದಲ್ಲಿ ಇದೆ ಎಂದು ಮಾಹಿತಿ ನೀಡುತ್ತಿದ್ದಂತೆಯೇ ಮಧ್ಯೆ ಪ್ರವೇಶಿಸಿದ ಜಿಲ್ಲಾ ಉಸ್ತುವಾರಿ ಸಚಿವರು, ಆಗಸ್ಟ್ ತಿಂಗಳವರೆಗೆ ಕುಡಿಯುವ ನೀರಿನ ಲಭ್ಯತೆಯನ್ನು ಬಳಸಿಕೊಳ್ಳಬೇಕು ಎಂದರು. ಗ್ರಾಮೀಣ ಪ್ರದೇಶ 40 ಬಹುಹಳ್ಳಿ ಕುಡಿಯುವ ನೀರಿನ (ಎಂವಿಎಸ್) ಯೋಜನೆಗಳು ಸಮರ್ಪಕವಾಗಿ ನಡೆಯುತ್ತಿವೆ ಎಂದು ಜಿಲ್ಲಾಧಿಕಾರಿ ವಿವರಿಸಿದರು.

ಮುದ್ದೇಬಿಹಾಳ ಶಾಸಕರಾದ ಸಿ.ಎಸ್. ನಾಡಗೌಡ ಮಾತನಾಡಿ, ಜಲಾಶಯದ ಸ್ಟೋರೇಜ್ ನೋಡಿಕೊಂಡು ನೀರಿನ ಸಮರ್ಪಕ ನಿರ್ವಹಣೆ ಮಾಡಬೇಕು ಎಂದು ಸಲಹೆ ಮಾಡಿದರು.

## ನಾಳೆ ಕೆರೆಗಳಿಗೆ ನೀರು

ಕೆರೆಗಳಿಗೆ ನೀರು ಹರಿಸುವ ಸಂದರ್ಭದಲ್ಲಿ ನಿಗಾವಹಿಸಿ ಕೊನೆಯ ಹಂತದವರೆಗೂ ನೀರು ತಲುವಂತೆ ನೋಡಿಕೊಳ್ಳಬೇಕು ಎಂದ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲರು, ಕೆರೆ ತುಂಬುವ ಶೆಡ್ಯೂಲ್ ಪ್ರಕಾರ ತುಂಬಿಸಬೇಕು. ಒಟ್ಟು 2.3 ಟಿಎಂಸಿ ನೀರು ನಾಳೆ ಹರಿಸಲಾಗುವುದು ಎಂದರು.

ಮೊದಲು ಟೇಲ್ ಎಂಡ್ ನೀರು ತಲುಪುವಂತೆ ನಿರ್ವಹಣೆ ಮಾಡಿ, ಕುಡಿಯುವ ನೀರಿನ ಉದ್ದೇಶಕ್ಕೆ ನೀರು ಹರಿಸಲಾಗುತ್ತಿದೆ. ಅದೇ ಉದ್ದೇಶಕ್ಕೆ ಮಾತ್ರ ನೀರು ಸದ್ಬಳಕೆಯಾಗುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ ಸಚಿವರು, ಈ ವಿಷಯದಲ್ಲಿ ಪೊಲೀಸ್ ಇಲಾಖೆ, ಸಂಬಂಧಿಸಿದ ಇಲಾಖೆ ಸಮನ್ವಯತೆ ಸಾಧಿಸಬೇಕು ಎಂದರು.

ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಮಾತನಾಡಿ, ನಗರದ ಹಳೆಯ ಬೋರವೆಲ್ ಗಳು ಚಾಲ್ತಿಯಲ್ಲಿರುವಂತೆ ನೋಡಿಕೊಳ್ಳಬೇಕು ಎಂದು ಸಭೆಯಲ್ಲಿ ಅಧಿಕಾರಿಗಳಿಗೆ ಸಲಹೆ ಮಾಡಿದರು.

ಯಾವ ಯಾವ ವಾರ್ಡಿಗೆ ಎಷ್ಟು ನೀರು ಎಂಬುದಾಗಿ ಶೆಡ್ಯೂಲ್ ಮಾಡಿ ಸಮರ್ಪಕವಾಗಿ ನೀರು ಪೂರೈಸಬೇಕು ಎಂದರು.

## ಭೂತನಾಳ ಕೆರೆಯಲ್ಲಿ ನೀರು ಸಂಗ್ರಹಿಸಿ

ಭೂತನಾಳ ಕೆರೆಗೆ ವಿಶೇಷವಾಗಿ ಬೇಸಿಗೆ ಸಂದರ್ಭದಲ್ಲಿ ನೀರು ಸಂಗ್ರಹಿಸಲು ಕ್ರಮ ಕೈಗೊಳ್ಳಬೇಕು ಎಂದು ಸಚಿವರು ತಿಳಿಸಿದರು.

ನಗರಕ್ಕೆ ನೀರಿನ ಯಾವುದೇ ತೊಂದರೆಯಾಗದ ಹಾಗೆ ನೀರು ನಿರ್ವಹಣೆ ಮಾಡಬೇಕು. ನಗರದ ಬಾವಿಗಳನ್ನು ಸ್ವಚ್ಛಗೊಳಿಸಿ, ಅನ್ಯ ಉದ್ದೇಶಗಳಿಗೆ ನೀರು ಬಳಸಬಹುದಾಗಿದೆ. 26 ಬಾವಿಗಳಿಗೆ ಸಿಎಸ್ ಆರ್ ಅನುದಾನದಲ್ಲಿ ಬಾವಿ ಸ್ವಚ್ಛಗೊಳಿಸಿ ಮೋಟಾರ್ ಅಳವಡಿಸಲಾಗಿದೆ. ತಾಜಬಾವಡಿ ನೀರೂ ಬಳಕೆಯಗುತ್ತಿದೆ. ಬೋರವೆಲ್ ಮರುಪೂರಣಗೊಳಿಸಿ ನೀರು ಬಳಸಿಕೊಳ್ಳಬಹುದು. ಬಾವಿ ನೀರನ್ನು ಪರ್ಯಾಯ ವ್ಯವಸ್ಥೆ ಮಾಡಿ,ಸ್ಥಳೀಯ ಸಂಸ್ಥೆಯಲ್ಲಿ ಸಮಸ್ಯೆ ಇರದಂತೆ ಮುಂಜಾಗ್ರತೆ ವಹಿಸಬೇಕು ಎಂದರು.

ಅಕಾಲಿಕ ಆಲಿಕಲ್ಲು ಮಳೆಯಿಂದಾಗಿ ತೋಟಗಾರಿಕೆ ಬೆಳೆಗಳು ಸೇರಿದಂತೆ ಕೆಲವು ಕಡೆ ಕೃಷಿ ಬೆಳೆ ಹಾನಿಯಾಗಿದೆ. ಬೆಳೆ ಹಾನಿಗೆ ಪರಿಹಾರ ಕಲ್ಪಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಸೂಚಿಸಿದರು.

## ಜಲಧಾರೆ ಯೋಜನೆ ಶೀಘ್ರ ಪೂರ್ಣಗೊಳಿಸಿ

ಬೇಸಿಗೆಯಲ್ಲೂ ಜಿಲ್ಲೆಯಲ್ಲಿ ನೀರಿನ ಶಾಶ್ವತ ಪರಿಹಾರ ಕಲ್ಪಿಸಲಿರುವ ಮಹತ್ವಾಕಾಂಕ್ಷೆಯ ಜಲಧಾರೆ ಯೋಜನೆಯನ್ನು ಯುದ್ಧೋಪಾದಿಯಲ್ಲಿ ಕೈಗೊಂಡು ಶೀಘ್ರದಲ್ಲಿ ಪೂರ್ಣಗೊಳಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು ಮಾಡಿದರು.

ಜಲಧಾರೆ ಯೋಜನೆ ಭೌತಿಕವಾಗಿ ಶೇ. 81 ರಷ್ಟು ಪೂರ್ಣ ಆಗಿದೆ. ಅರಣ್ಯ ಹಾಗೂ ಕೆಲವು ಸಮಸ್ಯೆಗಳಿವೆ. ಆ ಸಮಸ್ಯೆಗಳಿಗೆ ಬೇಗ ಪರಿಹಾರ ಕಂಡುಕೊಂಡು, ಯೋಜನೆ ಪೂರ್ಣಗೊಳಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಆದಾಗ್ಯೂ ನಾವು ಜೂನ್, ಜುಲೈವರೆಗೆ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳುತ್ತಿದ್ದೇವೆ. ಆದರೆ ಜಲಧಾರೆ ಯೋಜನೆಯಲ್ಲಿರುವ ಬಾಕಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಬೇಕು ಎಂದು ಸಚಿವರು ಗಂಭೀರವಾಗಿ ಹೇಳಿದರು.

ಸಿಂದಗಿ ಪಟ್ಟಣದಲ್ಲಿ ಜಲಧಾರೆ ಯೋಜನೆಯ ಓವರ್ ಹೆಡ್ ಟ್ಯಾಂಕ್ ಪೈಪಲೈನ್ ಎಷ್ಟು ಕಿಮೀ ಆಗಿದೆ. ಅದರ ಪ್ರಗತಿ ಆಲಮೇಲ ಹಾಗೂ ಮನಗೂಳಿಯಲ್ಲಿರುವ ಭೂಮಿ ಸಮಸ್ಯೆಯನ್ನು ಶೀಘ್ರ ಇತ್ಯರ್ಥಪಡಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

## 2027 ಮಾರ್ಚ್ ವೇಳೆಗೆ ಹಂತ-2 ಪೂರ್ಣಗೊಳಿಸಿ

ಮಹತ್ವಕಾಂಕ್ಷೆಯ ಜಲಧಾರೆ ಹಂತ -1 ಹಾಗೂ ಹಂತ-2ರ ಯಾವುದೇ ಸಮಸ್ಯೆಗಳಿದ್ದರೂ ಅವುಗಳನ್ನು ನಿವಾರಿಸಿಕೊಂಡು ಬೇಗ ಕಾಮಗಾರಿ ಮಾಡಿಸಬೇಕು. ಅರಣ್ಯ ಇಲಾಖೆ ಈ ಯೋಜನೆಯಡಿಯಿರುವ ತೊಂದರೆ ಬಗೆಹರಿಸಬೇಕು. 2027 ಮಾರ್ಚ್ ಒಳಗಾಗಿ ಪೂರ್ಣಗೊಳಿಸುವಂತೆ ಸಚಿವರು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ಈ ಯೋಜನೆಯಡಿ ಇರುವ ವಿದ್ಯುತ್ ಪೂರೈಕೆಗೆ ಇರುವ ತಾಂತ್ರಿಕ ಮತ್ತಿತರೆ ಸಮಸ್ಯೆ ಪರಿಹರಿಸಲು ಸಭೆ ನಡೆಸಿ ಅಗತ್ಯ ಸಲಹೆ ನೀಡಿ, ಈ ಮಾಹಿತಿಯನ್ನು ಆಯಾ ಶಾಸಕರಿಗೆ ಒದಗಿಸಬೇಕು ಎಂದು ಸಚಿವರು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಯೋಜನೆ ಪೂರ್ಣಗೊಳಿಸುವ ನಿಟ್ಟಿನಲ್ಲಿ ಯಾವುದೇ ಗೊಂದಲ, ಸಮಸ್ಯೆ ಮಾಡಿಕೊಳ್ಳದೇ ಸುಸೂತ್ರವಾಗಿ ಯೋಜನೆ ನಿರ್ವಹಿಸುವ ಮೂಲಕ ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು. ಈ ಕುರಿತು ಪ್ರತಿ ತಿಂಗಳು ವರದಿ ಸಲ್ಲಿಸಬೇಕು. ಜಿಲ್ಲೆಯ ಜನರ ನೀರಿನ ಸಮಸ್ಯೆ ಶಾಶ್ವತ ಬಗೆಹರಿಸುವ ಈ ಯೋಜನೆ ಪೂರ್ಣಗೊಳಿಸುವ ನಿಟ್ಟಿನಲ್ಲಿ ಅಧಿಕಾರಿಗಳು ತಾಲೂಕಿನಲ್ಲಿ ಸಭೆ ನಡೆಸಬೇಕು. ಜಿಲ್ಲಾ ಹಂತದಲ್ಲೂ ಸಭೆ ನಡೆಸಬೇಕು ಎಂದರು.

ಭೀಮಾ ನದಿಯ ಮೇಲೆ ಬರುವ ಬಹು ಹಳ್ಳಿ ಕುಡಿಯುವ ನೀರಿನ ಯೋಜನೆಯಡಿ ಸಮರ್ಪಕವಾಗಿ ನೀರು ಪೂರೈಸಬೇಕು ಎಂದರು.

ಸಭೆಯಲ್ಲಿ ಸಂಸದ ರಮೇಶ ಜಿಗಜಿಣಗಿ, ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ, ಅಪ್ಪಾಜಿ ಸಿ. ಎಸ್. ನಾಡಗೌಡ, ವಿಠ್ಠಲ ಕಟಕದೊಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ಮೇಯರ್ ಮಡಿವಾಳಪ್ಪ ಕರಡಿ,ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಆಲಮಟ್ಟಿ ಜಲಾಶಯದ ಮುಖ್ಯ ಎಂಜಿನೀಯರ್‌ಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾವೇರಿ ಮಾದರಿಯಲ್ಲಿ ನಗರ ಕುಡಿಯುವ ನೀರು ಪೂರೈಕೆಗೆ ಪರ್ಯಾಯ ಯೋಜನೆ:ಸಚಿವ ಎಂ. ಬಿ. ಪಾಟೀಲ




**ವಿಜಯಪುರ, ಏ. 11 :** ವಿಜಯಪುರ ನಗರಕ್ಕೆ ಸಮರ್ಪಕವಾಗಿ ಹಾಗೂ ಇನ್ನಷ್ಟೂ ಪರಿಣಾಮಕಾರಿಯಾಗಿ ಕುಡಿಯುವ ನೀರು ಪೂರೈಸುವ ನಿಟ್ಟಿನಲ್ಲಿ ಕಾವೇರಿ 1, 2 ನೇ ಹಂತದ ಯೋಜನೆಯ ಮಾದರಿಯಲ್ಲಿ ಕೃಷ್ಣಾ ನದಿಯಿಂದ ವಿಜಯಪುರಕ್ಕೆ ನೀರು ಪೂರೈಕೆ ಮಾಡುವ ಇನ್ನೊಂದು ಹಂತದ ಪರ್ಯಾಯ ಯೋಜನೆಯನ್ನು ರೂಪಿಸಲಾಗುತ್ತಿದ್ದು, ಸಮಗ್ರ ಯೋಜನಾ ವರದಿ ಸಿದ್ಧಗೊಳ್ಳುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ಪ್ರಕಟಿಸಿದರು.

ವಿಜಯಪುರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಅಧಿಕಾರಿಗಳೊಂದಿಗೆ ಸಮಾಲೋಚನಾ ಸಭೆ ನಡೆಸಿದ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಬರುವ 30 ವರ್ಷಗಳ ಭವಿಷ್ಯದ ದೂರದೃಷ್ಟಿಕೋನ ಆಧರಿಸಿ ನಗರದಲ್ಲಿ ಜನಸಂಖ್ಯೆ ಹೆಚ್ಚಳವಾಗುತ್ತಿದೆ. ನಗರ ವ್ಯಾಪ್ತಿಯ ವಿಸ್ತೀರ್ಣವೂ ವ್ಯಾಪಿಸುತ್ತಿದೆ. ಹೀಗಾಗಿ ಜನಸಂಖ್ಯೆಯ ಹೆಚ್ಚಳ ಆಧರಿಸಿ ಕುಡಿಯುವ ನೀರಿನ ಪೂರೈಕೆ ಯೋಜನೆಯೂ ವಿಸ್ತರಣೆಗೊಳ್ಳಬೇಕಾಗಿರುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಪೂರ್ವ ತಯಾರಿ ನಡೆದಿದ್ದು, ಮುಂಬರುವ ಬಜೆಟ್‌ನಲ್ಲಿ ಇದಕ್ಕೆ ಅನುದಾನ ಪಡೆದುಕೊಳ್ಳುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ವಿಜಯಪುರ ನಗರದಲ್ಲಿ 15ರಿಂದ 20 ದಿನಕ್ಕೊಮ್ಮೆ ವಿವಿಧ ಬಡಾವಣೆಗಳಲ್ಲಿ ನೀರು ಪೂರೈಕೆಯಾಗುತ್ತಿದೆ ಎಂಬ ದೂರುಗಳು ಕೇಳಿ ಬರುತ್ತಿವೆ. ಈ ಹಿನ್ನೆಲೆಯಲ್ಲಿ ಇನ್ನೊಂದು ಹಂತದ ಯೋಜನೆ ಅನುಷ್ಠಾನಗೊಂಡರೆ ಕುಡಿಯುವ ನೀರಿನ ಸಮಸ್ಯೆಯನ್ನು ಸಂಪೂರ್ಣವಾಗಿ ತೊಡೆದು ಹಾಕಬಹುದಾಗಿದೆ. ಈ ನಿಟ್ಟಿನಲ್ಲಿ ಪರ್ಯಾಯ ಯೋಜನೆಯನ್ನು ಶೀಘ್ರವೇ ಅನುಷ್ಠಾನಗೊಳಿಸಲಾಗುತ್ತಿದ್ದು, ಸಮಗ್ರ ಯೋಜನಾ ವರದಿ ಸಿದ್ಧಪಡಿಸಿ ನಂತರ ಈ ಯೋಜನೆ ಕಾರ್ಯಗತಗೊಳಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ವಿವರಿಸಿದರು.

ನಗರ ಪ್ರದೇಶದಲ್ಲಿಯೂ ಕುಡಿಯುವ ನೀರಿನ ವ್ಯತ್ಯಯ ತಡೆಗಟ್ಟುವ ನಿಟ್ಟಿನಲ್ಲಿ ಜಲಮಂಡಳಿ ಹಾಗೂ ಪಾಲಿಕೆ ಅಧಿಕಾರಿಗಳು ಸಮನ್ವಯ ಸಾಧಿಸಿ ಕುಡಿಯುವ ನೀರಿನ ಪೂರೈಕೆಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ಅಗತ್ಯ ನಿರ್ದೇಶನ ನೀಡಲಾಗಿದೆ. ಎಲ್ಲ ಬಾವಡಿಗಳನ್ನು ಸ್ವಚ್ಛಗೊಳಿಸಿ ಗೃಹೋಪಯೋಗಿ ಚಟುವಟಿಕೆಗಳಿಗೆ ಬಳಸುವ ನಿಟ್ಟಿನಲ್ಲಿಯೂ ಅಗತ್ಯ ಕಾರ್ಯಯೋಜನೆ ರೂಪಿಸುವಂತೆಯೂ ನಿರ್ದೇಶನ ನೀಡಲಾಗಿದೆ ಎಂದರು.

## 50 ಹಳ್ಳಿಗಳಲ್ಲಿ ಸಮಸ್ಯೆ ಎದುರಾಗುವ ಸಾಧ್ಯತೆ

ಗ್ರಾಮೀಣ ಭಾಗದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದ್ದು, 50 ಗ್ರಾಮಗಳಲ್ಲಿ ಈ ಸಮಸ್ಯೆ ತಲೆದೋರಬಹುದು ಎಂದು ಅಂದಾಜಿಸಲಾಗಿದ್ದು, ಅಲ್ಲಿ ಮುಂಜಾಗ್ರತಾ ಕ್ರಮವಾಗಿ ಕಾರ್ಯಚಟುವಟಿಕೆ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಚಡಚಣ ತಾಲೂಕಿನಲ್ಲಿ 17, ಇಂಡಿ ತಾಲೂಕಿನಲ್ಲಿ 22, ವಿಜಯಪುರ ತಾಲೂಕಿನ 3, ತಾಳಿಕೋಟೆ ತಾಲೂಕಿನಲ್ಲಿ 2 , ದೇವರಹಿಪ್ಪರಗಿಯಲ್ಲಿ ಒಂದು, ತಿಕೋಟಾ ತಾಲೂಕಿನಲ್ಲಿ 5 ಗ್ರಾಮಗಳಲ್ಲಿ ಹಾಗೂ ಜಿಲ್ಲೆಯ 72 ಜನವಸತಿ ಕೇಂದ್ರಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವ ಡಾ.ಎಂ.ಬಿ. ಪಾಟೀಲ ವಿವರಿಸಿದರು.

ಈ ವರ್ಷ ಶೇ.53ರಷ್ಟು ಮಳೆ ಹೆಚ್ಚುವರಿಯಾಗಿದೆ. ಜಲಾಶಯಗಳಲ್ಲಿ ಕಳೆದ ವರ್ಷಕ್ಕೆ ಹೋಲಿಕೆ ಮಾಡಿದಾಗ ಆಲಮಟ್ಟಿ ಜಲಾಶಯದಲ್ಲಿ 29 ಟಿಎಂಸಿ ನೀರಿನ ಸಂಗ್ರಹಣೆ ಇತ್ತು. ಪ್ರಸಕ್ತ ವರ್ಷ 34 ಟಿಎಂಸಿ ಇದ್ದು, 5 ಟಿಎಂಸಿ ಹೆಚ್ಚುವರಿಯಾಗಿ ನೀರಿನ ಸಂಗ್ರಹಣೆ ಇದೆ. ನಾರಾಯಣಪೂರ ಜಲಾಶಯದಲ್ಲಿ ಕಳೆದ ವರ್ಷ 19 ಟಿಎಂಸಿ ನೀರಿನ ಸಂಗ್ರಹಣೆ ಇದ್ದರೆ, ಪ್ರಸಕ್ತ ವರ್ಷ 21 ಟಿಎಂಸಿ ಅಂದರೆ ಹೆಚ್ಚುವರಿಯಾಗಿ 3 ಟಿಎಂಸಿಗಳಷ್ಟು ಹೆಚ್ಚುವರಿ ನೀರಿನ ಸಂಗ್ರಹಣೆ ಇದೆ ಎಂದು ವಿವರಿಸಿದರು.

## ಜಲಧಾರೆ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಗಡುವು

ಜಲಧಾರೆ ಪ್ರಥಮ ಹಾಗೂ ದ್ವಿತೀಯ ಹಂತದ ಯೋಜನೆಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಸೂಚನೆ ನೀಡಲಾಗಿದೆ. ಪ್ರಥಮ ಹಂತದ ಜಲಧಾರೆ ಯೋಜನೆಯನ್ನು 6 ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಿ, ಜಲಧಾರೆ  2 ನೇ ಹಂತದ ಯೋಜನೆಯನ್ನು ಮುಂದಿನ ವರ್ಷದ ಮಾರ್ಚ್ ಮಾಸಾಂತ್ಯದವರೆಗೆ ಪೂರ್ಣಗೊಳಿಸುವ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಗಡುವು ನೀಡಲಾಗಿದೆ ಎಂದರು.

ಭೀಮಾ ನದಿ ನೀರು ಆಧರಿಸಿ ಅನುಷ್ಠಾನಗೊಳಿಸುವ ಬಹುಹಳ್ಳಿ ಕುಡಿಯುವ ನೀರಿನ ಯೋಜನೆಗಳಿಗೆ ಅನೇಕ ಸವಾಲುಗಳು ಎದುರಾಗಿವೆ. ಸೊಲ್ಲಾಪೂರಕ್ಕೂ ನೀರಿನ ಪೂರೈಕೆಯ ವಿಷಯವಾಗಿ ಉದ್ಭವಿಸುವ ಸಮಸ್ಯೆಯಿಂದ ಈ ಯೋಜನೆಗಳಿಗೆ ಒಂದಿಷ್ಟು ತೊಡಕುಗಳು ಎದುರಾಗಿವೆ ಎಂದು ವಿಶ್ಲೇಷಿಸಿದರು.


## ಆಗಸ್ಟ್ ನಲ್ಲಿ ನವರಸಪುರ ಉತ್ಸವ

ಬಿಸಿಲಿನ ತೀವ್ರತೆ ಹಾಗೂ ಪರೀಕ್ಷೆಗಳ ದಿನಾಂಕ ಹಿನ್ನೆಲೆಯಲ್ಲಿ ಆಗಸ್ಟ್ ತಿಂಗಳಲ್ಲಿ ನವರಸಪುರ ಉತ್ಸವವನ್ನು ಆಯೋಜಿಸುವ ನಿಟ್ಟಿನಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಸಚಿವ ಪಾಟೀಲ ಪ್ರಕಟಿಸಿದರು.

ನವರಸಪುರ ಉತ್ಸವಕ್ಕೆ ಶಾಸಕ ಯತ್ನಾಳರು ಆಕ್ಷೇಪ ವ್ಯಕ್ತಪಡಿಸುತ್ತಿದ್ದರಲ್ಲ ಎಂಬ ಪ್ರಶ್ನೆಗೂ ಉತ್ತರಿಸಿದ ಸಚಿವ ಡಾ.ಎಂ.ಬಿ. ಪಾಟೀಲ, ಅವರಿಗೆ ಇಷ್ಟವಿಲ್ಲ ಎಂದರೆ ಅವರು ಮನೆಯಲ್ಲಿ ಕುಳಿತುಕೊಳ್ಳಲಿ. ನಾವು ನವರಸಪುರ ಉತ್ಸವ ಹೆಸರಿನಲ್ಲಿಯೇ ಉತ್ಸವವನ್ನು ಆಚರಿಸುತ್ತೇವೆ. ಯಾವ ಹೆಸರು ಬದಲಾವಣೆ ಮಾಡುವುದಿಲ್ಲ. ಆಗಸ್ಟ್ ತಿಂಗಳಲ್ಲಿ ಈ ಉತ್ಸವ ಆಚರಿಸಲಾಗುವುದು ಎಂದು ವಿವರಿಸಿದರು.

# ಎಇಇ ಅಜಯಸಿಂಗ್ ಬಳಿ 14 ಕೋಟಿ ಅಕ್ರಮ ಆಸ್ತಿ ಪತ್ತೆ





**ಬೆಳಗಾವಿ,ಏ.11–** ನಗರಾಭಿವೃದ್ಧಿ ಕೋಶದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಅಜಯಸಿಂಗ್ ರಜಪೂತಗೆ ಸೇರಿದ ನಿವಾಸ ಹಾಗೂ ಕಚೇರಿಗಳ ಮೇಲೆ ನಡೆದ ಲೋಕಾಯುಕ್ತ ದಾಳಿಯಲ್ಲಿ 14 ಕೋಟಿ ರೂಗಳಿಗೂ ಅಧಿಕ ಮೊತ್ತದ ಅಕ್ರಮ ಆಸ್ತಿ ಪತ್ತೆಯಾಗಿದೆ.

ಭ್ರಷ್ಟಾಚಾರ ತಡೆ ಕಾಯ್ದೆ ಅಡಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ಠಾಣೆ ಬೆಳಗಾವಿಯಲ್ಲಿ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ, ಏಪ್ರಿಲ್ 9ರಂದು ಆಂಜನೇಯ ನಗರದ ಮನೆ, ಕಚೇರಿ, ಬ್ಯಾಂಕ್ ಲಾಕರ್ ಸೇರಿದಂತೆ ಸೇರಿದಂತೆ ಒಟ್ಟು ಏಳು ಕಡೆಗಳಲ್ಲಿ ಏಕಕಾಲಕ್ಕೆ ಅಧಿಕಾರಿಗಳು ಶೋಧ ನಡೆಸಿದ್ದರು. ದಾಳಿ ಅಂತ್ಯಗೊಂಡಿದ್ದು, ಈ ವೇಳೆ ಏನೆಲ್ಲಾ ಆಸ್ತಿ ಪತ್ತೆಯಾಗಿದೆ ಎಂಬುದರ ಕುರಿತು ಬೆಳಗಾವಿ ಲೋಕಾಯುಕ್ತ ಎಸ್‌ಪಿ ಪ್ರಕಟಣೆ ಹೊರಡಿಸಿದ್ದಾರೆ.

ಆಸ್ತಿ ವಿವರ: ಅಧಿಕಾರಿಯ ಪರಿಶೀಲನೆ ಸಂದರ್ಭದಲ್ಲಿ 5 ಕೆಜಿ 960 ಗ್ರಾಂ ಚಿನ್ನಾಭರಣ, 5 ಕೆಜಿ ಬೆಳ್ಳಿ ಆಭರಣಗಳು ಪತ್ತೆಯಾಗಿವೆ. ಇದಲ್ಲದೇ 3.12 ಕೋಟಿ ರೂಪಾಯಿ ಬ್ಯಾಂಕ್ ಠೇವಣಿ ಇಟ್ಟಿರುವುದು ಬೆಳಕಿಗೆ ಬಂದಿದೆ. ಬೆಳಗಾವಿಯಲ್ಲಿ 3 ಮನೆಗಳು. ಸವದತ್ತಿ, ಹುಕ್ಕೇರಿ ಹಾಗೂ ಹುಬ್ಬಳ್ಳಿಯಲ್ಲಿ 5 ನಿವೇಶನಗಳನ್ನು ಅಜಯಸಿಂಗ್ ಖರೀದಿಸಿರುವುದು ದಾಖಲೆಗಳಿಂದ ಕಂಡುಬಂದಿದೆ. ಮನೆಯಲ್ಲಿ ಜೊತೆಗೆ ಕಾರುಗಳು ಮತ್ತು ಬೈಕ್ ಸೇರಿ 14 ಕೋಟಿ ರೂ.ಗಳಿಗಿಂತ ಹೆಚ್ಚಿನ ಆಸ್ತಿ ಪತ್ತೆಯಾಗಿದೆ ಎಂದು ಎಸ್‌ಪಿ ಮಾಹಿತಿ ನೀಡಿದ್ದಾರೆ.

ಲೋಕಾಯುಕ್ತ ಅಧಿಕಾರಿಗಳು ನೀಡಿದ ಅಧಿಕೃತ ಮಾಹಿತಿ ಪ್ರಕಾರ, ಅಜಯಸಿಂಗ್ ಅವರು ಆದಾಯಕ್ಕಿಂತ ಹೆಚ್ಚಿನ ಆಸ್ತಿ ಗಳಿಸಿರುವುದು ಮೇಲ್ನೋಟಕ್ಕೆ ಸ್ಪಷ್ಟವಾಗಿದೆ. ಸದ್ಯಕ್ಕೆ ಎಲ್ಲಾ ದಾಖಲೆಗಳು ಮತ್ತು ನಗದನ್ನು ವಶಕ್ಕೆ ಪಡೆದಿರುವ ಅಧಿಕಾರಿಗಳು ತನಿಖೆ ಮುಂದುವರೆಸಿದ್ದಾರೆ.

ಇತ್ತೀಚೆಗೆ, ಅಕ್ರಮ ಆಸ್ತಿ ಸಂಪಾದನೆ ಆರೋಪದಡಿ 8 ಸರ್ಕಾರಿ ನೌಕರರ ವಿರುದ್ಧ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಕೋಟ್ಯಂತರ ಮೌಲ್ಯದ ಅಕ್ರಮ ಚರ ಹಾಗೂ ಸ್ಥಿರಾಸ್ತಿಗಳನ್ನು ಪತ್ತೆ ಮಾಡಿದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಗ್ರಾಮೀಣ ಪ್ರದೇಶದ ರೈತರ ಪ್ರಗತಿಗಾಗಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ಪಾತ್ರ ಮಹತ್ವದ್ದು



**ಹುಳಿಯಾರು, ಏ. 11–** ಗ್ರಾಮೀಣ ಬ್ಯಾಂಕುಗಳು ಸುಮಾರು ಐದು ದಶಕಗಳಿಂದ ಬಡವ, ಬಲ್ಲಿದ, ಶ್ರೀಮಂತನೆಂಬ ಬೇಧವಿಲ್ಲದೆ ಅದರಲ್ಲೂ ಗ್ರಾಮೀಣ ಪ್ರದೇಶದ ರೈತರು, ಕೂಲಿಕಾರ್ಮಿಕರು, ಅಂಗವಿಕಲರು, ವ್ಯಾಪಾರಸ್ಥರು ಮುಂತಾದ ಎಲ್ಲ ವರ್ಗಗಳ ಜನರಿಗೆ ಕಿಸಾನ್ ಕ್ರೆಡಿಟ್ ಕಾರ್ಡ್, ಮುದ್ರಾ ಸಾಲಗಳು, ಸ್ವಸಹಾಯ ಸಂಘಗಳಿಗೆ, ಹೈನುಗಾರಿಕೆಗೆ, ಕೈಗಾರಿಕೋದ್ಯಮಿಗಳಿಗೆ, ಗೃಹ ಸಾಲ, ವಾಹನ ಸಾಲ, ನೀರಾವರಿ, ಗುಡಿ ಕೈಗಾರಿಕೆಗಳಿಗೆ ಮುಂತಾದ ಎಲ್ಲ ರೀತಿಯ ಸರ್ಕಾರಿ ಯೋಜನೆಗಳ ಸೌಲಭ್ಯವನ್ನು ಒದಗಿಸಿ ದೇಶದ ಆರ್ಥಿಕತೆಯನ್ನೇ ಬಲಪಡಿಸುವಲ್ಲಿ ನಮ್ಮ ಬ್ಯಾಂಕುಗಳು ಮಹತ್ತರ ಪಾತ್ರವಹಿಸಿವೆ ಎಂದು ತುಮಕೂರು ಕರ್ನಾಟಕ ಗ್ರಾಮೀಣ ಬ್ಯಾಂಕಿನ ಪ್ರಾದೇಶಿಕ ಕಚೇರಿಯ ರೀಜನಲ್ ಮೆನೇಜರ್ ರೂಪೇಶ್ ಕುಮಾರ್ ಹೇಳಿದರು.

ಪಟ್ಟಣಕ್ಕೆ ಸಮೀಪವಿರುವ ಕಂದಿಕೆರೆ ಯಲ್ಲಿ ಬ್ಯಾಂಕಿನ ಶಾಖೆಯ ಹೊಸ ಕಟ್ಟಡದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಂದಿಕೆರೆ ಕರ್ನಾಟಕ ಗ್ರಾಮೀಣ ಬ್ಯಾಂಕಿನ ವ್ಯವಸ್ಥಾಪಕರಾದ ಆರ್.ತಿಪ್ಪೇಸ್ವಾಮಿ ಕಂದಿಕೆರೆ ಶಾಖೆಯು ಪ್ರಾರಂಭವಾಗಿ ಸುಮಾರು 45 ವರ್ಷದ ನಂತರ ಸುಸಜ್ಜಿತವಾದ ಕಟ್ಟಡಕ್ಕೆ ಸ್ಥಳಾಂತರಗೊಳ್ಳಲು , ಕರ್ನಾಟಕ ಗ್ರಾಮೀಣ ಬ್ಯಾಂಕಿನ ಪ್ರಧಾನ ಕಚೇರಿಯ ಅಧ್ಯಕ್ಷರಾದ ಶ್ರೀಕಾಂತ್ ಬಂಡಿವಾಡ, ಜನರಲ್ ಮ್ಯಾನೇಜರ್‌ಗಳಾದ ಸಂಜೀವಪ್ಪ, ಸಂದೀಪ್ ರಂಜನ್ ವರ್ಮ ಇವರ ಮಾರ್ಗದರ್ಶನ ಹಾಗೂ ಈ ಊರಿನ ಜನರ ಸಹಕಾರವೇ ಕಾರಣ ಎಂದು ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಪ್ರಾದೇಶಿಕ ಕಚೇರಿಯ ಸೀನಿಯರ್ ಮ್ಯಾನೇಜರ್ ಅಕ್ಷರ, ಮ್ಯಾನೇಜರ್ ಲಕ್ಷ್ಮಿಕರ ರೆಡ್ಡಿ, ಆರ್ಥಿಕ ಸಾಕ್ಷರತಾ ಕೇಂದ್ರದ ಸಮಾಲೋಚಕರಾದ ಆರ್.ಎಂ.ಕುಮಾರಸ್ವಾಮಿ, ಕಂದಿಕೆರೆ ಕರ್ನಾಟಕ ಗ್ರಾಮೀಣ ಬ್ಯಾಂಕ್ ಶಾಖೆಯ ಅಧಿಕಾರಿಗಳಾದ ಈರಣ್ಣ, ಜಯಸಿಂಹ, ಕ್ಯಾಶಿಯರ್ ಕೋದಂಡರಾಮಯ್ಯ, ಸಿಬ್ಬಂದಿಗಳಾದ ಅಶೋಕ್, ವಿಜಯಲಕ್ಷ್ಮಿ, ಬಿಸಿ ಗಳಾದ ರಂಗಸ್ವಾಮಿ, ಷಡಕ್ಷರಿ, ಐ.ಡಿ.ಎಫ್‌ನ ಪುಷ್ಪ, ನದೀಮ್, ಜಗದೀಶ್, ಚಾಯ್ಸ್ ಯಶ್ವಂತ್, ವಕೀಲರುಗಳಾದ ಜ್ಞಾನಮೂರ್ತಿ, ಶಂಕರ್‌ನಾಯಕ್, ಶಾಂತಪ್ಪ, ದೇವಸ್ಥಾನದ ಅಧ್ಯಕ್ಷರಾದ ರಾಜಶೇಖರ್, ಕಾರ್ಯದರ್ಶಿ ರಂಗನಾಥ್, ಯಲ್ಲಮ್ಮ ರಾಜು, ಯಲ್ಲಮ್ಮ ದೇವಿ ದೇವಸ್ಥಾನದ ಅಧ್ಯಕ್ಷರಾದ ದೇವರಾಜ್, ಊರಿನ ಮುಖಂಡರುಗಳಾದ ರಾಜಣ್ಣ, ರಾಮಲಿಂಗಯ್ಯ, ಲಕ್ಷ್ಮಿಪುರ ರಂಗಸ್ವಾಮಿ, ಪ್ರಸಾದ್ ಗೌಡ, ಅಂಗಡಿ ಓಂಕಾರ ಮೂರ್ತಿ ಕಂದಿಕೆರೆ ರಾಜಕುಮಾರ್, ಬಸವರಾಜು, ಸಂಪತ್, ಶ್ರೀಧರ್, ಹೋಟೆಲ್ ರಾಜೇಶ್, ಮನೋಜ್, ಮಹೇಶ್, ಪ್ರದೀಪ್, ಬಿಲ್ಡಿಂಗ್ ಓನರ್ ಕೃಷ್ಣಚಾರ್ ಹಾಗೂ ಬ್ಯಾಂಕಿನ ವ್ಯಾಪ್ತಿಯಲ್ಲಿ ಬರುವ ಎಲ್ಲ ಗ್ರಾಮಗಳ ಗ್ರಾಹಕರು ಸ್ವಸಹಾಯ ಸಂಘದ ಸದಸ್ಯರುಗಳು ಭಾಗವಹಿಸಿದ್ದರು.

# ವಿಮಾನಸೇವೆ ಪುನರಾರಂಭ,ಮೆಗಾ ಟೆಕ್ಸಟೈಲ್ ಕಾರ್ಯ ತ್ವರಿತಗೊಳಿಸಲು ಮನವಿ



**ಕಲಬುರಗಿ,ಏ 11:** ಕೆಕೆಸಿಸಿಐ ಕಲಬುರಗಿಯಅಧ್ಯಕ್ಷ ಶರಣಬಸಪ್ಪಎಮ್ ಪಪ್ಪಾ ಆಡಳಿತ ಮಂಡಳಿ ಸದಸ್ಯರಾದ ಸಂತೋಷ ಸುರೇಶ ನಂದ್ಯಾಲ್, ಸಂಪತ್ ವಿ ಪಾಟೀಲ ಅವರ ನಿಯೋಗವು ಈ ಭಾಗದ ವಿಮಾನ ಸೇವೆ ಪುನರಾರಂಭಿಸುವುದು ಮತ್ತು ಪಿಎಂ ಮಿತ್ರ ಮೆಗಾ ಟೆಕ್ಸಟೈಲ್ ನ ಕೆಲಸ ತ್ವರಿತಗೊಳಿಸುವ ಬಗ್ಗೆ ಮತ್ತುಇತರಅಭಿವೃದ್ಧಿ ಕೆಲಸಗಳ ಕುರಿತು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆಇಲಾಖೆ ಸಚಿವ ಪ್ರಹ್ಲಾದ್ ಜೋಶಿ ಅವರನ್ನು ದೆಹಲಿಯಲ್ಲಿ ಭೇಟಿಯಾಗಿ, ಕಲಬುರಗಿ ವಿಮಾನ ಸೇವೆ ಪುನರಾರಂಭಿಸುವುದು ಮತ್ತು ಪಿಎಂ ಮಿತ್ರ ಮೆಗಾ ಟೆಕ್ಸಟೈಲ್‌ನ ಕೆಲಸ ತ್ವರಿತಗೊಳಿಸುವ ಬಗ್ಗೆ ಚರ್ಚಿಸಿದಾಗ, ತಕ್ಷಣ ಪ್ರಹ್ಲಾದ್ ಜೋಶಿಯವರು ವಿಮಾನಯಾನ ಖಾತೆ ಸಚಿವ ಕಿಂಜಾರಪುರಾಮ್ಮೋಹನ್ ನಾಯುಡು ಅವರನ್ನುದೂರವಾಣಿ ಮೂಲಕ ಸಂಪರ್ಕಿಸಿ ವಿಷಯ ತಿಳಿಸಿದಾಗ ಒಂದು ತಿಂಗಳಲ್ಲಿ ಕಲಬುರಗಿ ವಿಮಾನ ನಿಲ್ದಾಣದಿಂದ ವಿಮಾನ ಸೇವೆ ಪುನರಾರಂಭಿಸುವುದಾಗಿ ಭರವಸೆ ನೀಡಿದರು.

ಪಿಎಂ ಮಿತ್ರ ಮೆಗಾ ಟೆಕ್ಸಟೈಲ್‌ಸಹಿತ ಕಲ್ಯಾಣಕರ್ನಾಟಕ ಭಾಗದ ಸರ್ವತೋಮುಖಅಭಿವೃದ್ಧಿಗಾಗಿಕೇಂದ್ರ ಸಂಪುಟ ಸಭೆಯಲ್ಲಿ ಚರ್ಚಿಸಿ ತ್ವರಿತಗತಿಯಲ್ಲಿ ನ್ಯಾಯ ದೊರಕಿಸಿಕೊಡುವ ಆಶ್ವಾಸನೆ ನೀಡಿದರು.ಇದೇ ಸಮಯದಲ್ಲಿ ಪ್ರಹ್ಲಾದ್ ಜೋಶಿ ಅವರಿಗೆ ನವೆಂಬರ್ ನಡೆಸಲು ಉದ್ದೇಶಿಸಲಾದ ಕಲ್ಯಾಣಕರ್ನಾಟಕ ವಾಣಿಜ್ಯ ಮತ್ತುಕೈಗಾರಿಕಾ ಸಂಸ್ಥೆಯ ವಜ್ರ ಮಹೋತ್ಸವದ ಆಮಂತ್ರಣ ನೀಡಲಾಗಿತು. ಅವರು ಬರುವಒಪ್ಪಿಗೆ ಸೂಚಿಸಿದ್ದಾರೆ.

# ಅಸ್ಪೃಶ್ಯತೆ ಆಚರಣೆ ಸಮಾಜಕ್ಕೆ ಮಾರಕ :ಪ್ರೊ. ಬಸವರಾಜ ಜಾಲವಾದಿ




ವಿಜಯಪುರ, ಏ. 11 :ಎಲ್ಲರಿಗೂ ಬಂಡಾಯದ ಹಕ್ಕು ಇದ್ದರೂ ಕೂಡಾ ಬಂಡಾಯ ಏಳುವ ಅನಿವಾರ್ಯತೆ ದಲಿತರಿಗೆ ಮಾತ್ರ ಇದೆ. ಅಂತಹ ವಾತಾವರಣ ದೇಶದಲ್ಲಿ ಇನ್ನು ಜೀವಂತವಾಗಿದೆ. ಅಸ್ಪೃಶ್ಯತೆ ಆಚರಣೆ ಸಮಾಜಕ್ಕೆ ಮಾರಕವಾಗಿದೆ ಎಂದು ಪ್ರೊ. ಬಸವರಾಜ ಜಾಲವಾದಿ ಹೇಳಿದರು. ವಿಜಯಪುರ ನಗರದ ದರಾಬಾರ್ ಪ್ರೌಢ ಶಾಲೆ ಮೈದಾನದಲ್ಲಿ ಮೇ ಸಾಹಿತ್ಯ ಮೇಳ ವಿಜಯಪುರ ಬಳಗ ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಆಶ್ರಯದಲ್ಲಿ ಏಪ್ರಿಲ್ 10ರಿಂದ 14ರ ವರೆಗೆ 5ದಿನಗಳ ಕಾಲ ಹಮ್ಮಿಕೊಂಡಿರುವ ಬಿಜಾಪುರ ಬುದ್ಧ, ಬಸವ, ಬಾಬಾಸಾಹೇಬ ಅಂಬೇಡ್ಕರ್ ಪುಸ್ತಕ ಮೇಳದಲ್ಲಿ ಮೊದಲ ದಿನದ ಕವಿಗೋಷ್ಠಿಯ ಆಶಯ ನುಡಿ ಮಾತನಾಡಿದರು.

ಇಂದಿನ ಕವಿಗಳು ಬರೆಯುವುದು ನೋಡಿದರೆ ಸಮಾಜದಲ್ಲಿನ ಅಂಕು ಡೊಂಕು ತಿದ್ದುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದು ಆಶಯ ವ್ಯಕ್ತಪಡಿಸಿದರು.

ಕವಿಗೋಷ್ಠಿಯ ಅತಿಥಿ ಸ್ಥಾನವನ್ನು ವಹಿಸಿ ಹಿರಿಯ ಸಾಹಿತಿ ಶಂಕರ ಬೈಚಬಾಳ ಅವರು ಮಾತನಾಡಿ, ಹಿಂದು ಮುಸ್ಲಿಂ ಕ್ರೈಸ್ತರೆಲ್ಲರಲ್ಲಿ ನಾನು ಮನುಷ್ಯರನ್ನು ಕಾಣುತ್ತೇನೆ ಎಂದು ಕವಿ ರಂಜಾನ್ ದರ್ಗಾ ಅವರು ಹೇಳಿದರೆ ಹಿಂದು, ಮುಸ್ಲಿಂ, ಕ್ರೈಸ್ತರೆಲ್ಲರಿಗೊಂದೆ ಭಾರತ ಮಂದಿರ ಎಂದು ಕವಿ ಶಂ.ಗು. ಬಿರಾದಾರ ಹೇಳಿದ್ದಾರೆ. ಇಂತಹ ಕವಿಗಳ ಸಂದೇಶವನ್ನು ನಾವು ಮಧ್ಯಪ್ರಾಚ್ಯ ದೇಶಗಳ ಯುದ್ಧವನ್ನು ನಿಲ್ಲಿಸಲು ಕಳಿಸಬೇಕಿದೆ ಎಂದು ಹೇಳಿದರು.

ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿ ಹಿರಿಯ ಸಾಹಿತಿ ದೊಡ್ಡಣ್ಣ ಬಜಂತ್ರಿ ಅವರು ಮಾತನಾಡಿ, ಪ್ರಾಚೀನ ಕವಿಗಳ ಕಾವ್ಯ ಜೀವಂತವಾಗಿರುವಂತೆ ನಮ್ಮ ಕವಿತೆಗಳು ಜೀವಂತಿಕೆಯಿಂದ ಮುಂದಿನ ದಿನಗಳಲ್ಲಿ ಇರುತ್ತವೆಯೋ ಇಲ್ಲವೋ ಎಂಬ ಅನುಮಾನ ವ್ಯಕ್ತಪಡಿಸಿದ ಅವರು, ಸಮ ಸಮಾಜ ನಿರ್ಮಾಣ ಮಾಡುವ ಜವಾಬ್ದಾರಿ ಕವಿಗಳ ಮೇಲಿದೆ. ಕವಿತೆ ವಾಸ್ತವ ಸಂಗತಿಗಳ ಮೇಲೆ ಬೆಳಕು ಚೆಲ್ಲಬೇಕು ಎಂದು ಹೇಳಿದರು.

ಕವಿಗೋಷ್ಠಿಯಲ್ಲಿ ಶಿವಪುತ್ರ ಅಜಮನಿ, ಮುರುಗೇಶ ಸಂಗಮ, ಅಮಿರುದ್ದೀನ್ ಖಾಜಿ, ಶೇಷರಾವ ಮಾನೆ, ಎಸ್.ಎಂ. ನೆರಬೆಂಚಿ, ವೈ.ಎಚ್.ಲಂಬು ಕವನ ವಾಚಿಸಿದರು.

ಎಂ.ಬಿ. ಕಟ್ಟಿಮನಿ ಸ್ವಾಗತಿಸಿದರು. ಸುರೇಶ ಬಿಜಾಪುರ ನಿರೂಪಿಸಿದರು. ಸಂಘರ್ಷ ಹೊಸಮನಿ ವಂದಿಸಿದರು.

# ಚಪ್ಪಲಿ ಅಂಗಡಿಗೆ ಭೀಕರ ಅಗ್ನಿ ಅವಘಡ: ಲಕ್ಷಾಂತರ ನಷ್ಟ– ಶರಣಪ್ಪ ಮಾನೇಗಾರ್ ಭೇಟಿ, ಪರಿಹಾರಕ್ಕೆ ಒತ್ತಾಯ



**ಯಾದಗಿರಿ:ಏ.11:**ಜಿಲ್ಲೆಯ ಯಾದಗಿರಿ ತಾಲ್ಲೂಕಿನ ಯರಗೋಳ ಗ್ರಾಮದಲ್ಲಿ ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಚಪ್ಪಲಿ ಅಂಗಡಿಯೊಂದು ಸಂಪೂರ್ಣವಾಗಿ ಬೆಂಕಿಗೆ ಆಹುತಿಯಾಗಿ, ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳು ಸುಟ್ಟು ಭಸ್ಮವಾಗಿವೆ. ಘಟನೆಯಿಂದ ವ್ಯಾಪಾರಸ್ಥರು ಆಘಾತಕ್ಕೊಳಗಾಗಿದ್ದು, ಜೀವನೋಪಾಯ ಕಳೆದುಕೊಂಡ ದುಸ್ಥಿತಿ ಎದುರಾಗಿದೆ.

ಆಕಸ್ಮಿಕವಾಗಿ ಉಂಟಾದ ಬೆಂಕಿ ಕ್ಷಣಾರ್ಧದಲ್ಲೇ ಅಂಗಡಿಯನ್ನು ಆವರಿಸಿಕೊಂಡಿದ್ದು, ಒಳಗಿದ್ದ ಎಲ್ಲಾ ವಸ್ತುಗಳು ಸುಟ್ಟುಹೋಗಿವೆ. ಸ್ಥಳೀಯರ ಸಹಾಯದಿಂದ ಬೆಂಕಿ ನಂದಿಸಲು ಪ್ರಯತ್ನಿಸಲಾಯಿತಾದರೂ, ಆಗಾಗಲೇ ದೊಡ್ಡ ಪ್ರಮಾಣದ ನಷ್ಟ ಸಂಭವಿಸಿದೆ.

ಘಟನೆಯ ಮಾಹಿತಿ ತಿಳಿದ ತಕ್ಷಣವೇ ಹಿಂದುಳಿದ ವರ್ಗಗಳ ಮುಖಂಡರಾದ ಶ್ರೀ ಶರಣಪ್ಪ ಮಾನೇಗಾರ್ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಂತ್ರಸ್ತ ಅಂಗಡಿ ಮಾಲೀಕರನ್ನು ಭೇಟಿ ಮಾಡಿ ಸಾಂತ್ವನ ಹೇಳಿದ ಅವರು, ಸಂಭವಿಸಿದ ನಷ್ಟದ ಬಗ್ಗೆ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಬಡ ವ್ಯಾಪಾರಸ್ಥರೊಬ್ಬರು ಜೀವನೋಪಾಯಕ್ಕಾಗಿ ನಂಬಿಕೊಂಡಿದ್ದ ಅಂಗಡಿ ಬೆಂಕಿಗೆ ಆಹುತಿಯಾಗಿರುವುದು ಅತ್ಯಂತ ನೋವಿನ ಸಂಗತಿ. ಸಂತ್ರಸ್ತರಿಗೆ ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಯಿಂದ ಸೂಕ್ತ ಪರಿಹಾರ ದೊರಕುವಂತೆ ಕ್ರಮ ಕೈಗೊಳ್ಳಲಾಗುತ್ತದೆ," ಎಂದು ಭರವಸೆ ನೀಡಿದರು.

ಕಷ್ಟಪಟ್ಟು ಕಟ್ಟಿದ ಅಂಗಡಿ ಕಣ್ಣಮುಂದೆಯೇ ಸುಟ್ಟು ಹೋಗಿರುವುದರಿಂದ ಅಂಗಡಿ ಮಾಲೀಕರು ಕಂಗಾಲಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಗ್ರಾಮಸ್ಥರು ಹಾಗೂ ಸ್ಥಳೀಯ ಮುಖಂಡರು ಸೇರಿ, ಜಿಲ್ಲಾಡಳಿತ ತಕ್ಷಣ ಸ್ಪಂದಿಸಿ ಬಡ ವ್ಯಾಪಾರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಅಗ್ನಿ ಅವಘಡದ ನಿಖರ ಕಾರಣ ತಿಳಿದುಬಂದಿಲ್ಲದಿದ್ದರೂ, ಈ ಘಟನೆ ಗ್ರಾಮದಲ್ಲಿ ಆತಂಕ ಮೂಡಿಸಿದೆ.

# ಕೈ ಯುವ ನಾಯಕ ಫೈರೋಜ್ ಹತ್ಯೆ: ಹಂತಕರಿಗೆ ಶೋಧ



**ಧಾರವಾಡ,ಏ.11–**ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಫೈರೋಜ್ ಪಠಾಣ್ ಅವರನ್ನು ಕೊಲೆಗೈದು ಪರಾರಿಯಾಗಿರುವ ದುಷ್ಕರ್ಮಿಗಳ ಬಂಧನಕ್ಕೆ ಅವಳಿನಗರ ಪೊಲೀಸರು ತೀವ್ರ ಶೋಧ ನಡೆಸಿದ್ದಾರೆ.

ನಗರದ ಹಾಶ್ಮಿನಗರದಲ್ಲಿನ ಮನೆಯಲ್ಲಿ ಫೈರೋಜ್ ಪಠಾಣ್ ಅವರನ್ನು ಕೊಲೆಗೈದ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಇದೊಂದು ರಾಜಕೀಯ ಪ್ರೇರಿತವಾದ ಹತ್ಯೆ ಎಂದು ಫೈರೋಜ್ ಮನೆಯವರು ಆರೋಪಿಸಿದ್ದಾರೆ. ಮೃತ ಫೈರೋಜ್ ರಾಜಕೀಯವಾಗಿ ಬೆಳೆದಿದ್ದರು. ಇದೇ ತಿಂಗಳು 24 ರಂದು ಮದುವೆ ಸಹ ನಿಶ್ಚಯವಾಗಿತ್ತು. ಫೈರೋಜ್ ಪಠಾಣ್ ಮದುವೆಯ ತಯಾರಿಯಲ್ಲಿ ಬ್ಯುಸಿಯಾಗಿದ್ದರು.

ಫೈರೋಜ್ ಮನೆಗೆ ತೆರಳಿ ರೂಮ್‌ನ ಬಾಗಿಲು ಹಾಕಿಕೊಂಡಿದ್ದರೂ ಸಹ ಬಾಗಿಲು ಮುರಿದು ನಾಲ್ಕು ಆರೋಪಿಗಳು ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿ, ಕೊಲೆ ಮಾಡಿದ್ದಾರೆ. ಸ್ಥಳೀಯ ವ್ಯಕ್ತಿಗಳೇ ಹತ್ಯೆ ಮಾಡಿದ್ದಾರೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

ಸ್ಥಳದಲ್ಲಿ ನಡೆದ ಘಟನೆಯ ದೃಶ್ಯಾವಳಿ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿವೆ. ಇದನ್ನು ಆಧರಿಸಿ ಪೊಲೀಸರು ಆರೋಪಿಗಳಿಗೆ ಬಲೆ ಬೀಸಿದ್ದಾರೆ. ಸದ್ಯ ಸ್ಥಳಕ್ಕೆ ಹು–ಧಾ ನಗರ ಪೊಲೀಸ್ ಕಮೀಷನರ್ ಎನ್. ಶಶಿಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಬಳಿಕ ಮಾತನಾಡಿದ ಕಮೀಷನರ್ 'ಫೈರೋಜ್ ಪಠಾಣ್ ಅವರು ಮನೆಯಲ್ಲಿದ್ದ ಸಂದರ್ಭದಲ್ಲಿ 9:30 ರಿಂದ 10 ಗಂಟೆ ನಡುವೆ ಮೂರರಿಂದ ನಾಲ್ಕು ಜನ ಬಂದು ಹಲ್ಲೆ ಮಾಡಿದ್ದಾರೆ. ಹೀಗಾಗಿ, ತೀವ್ರ ರಕ್ತಸ್ರಾವ ಆಗಿ ಮೃತಪಟ್ಟಿದ್ದಾರೆ.

ಯಾವ ಕಾರಣಕ್ಕೆ ಮಾಡಿದ್ದಾರೆ ಹಾಗೂ ಯಾರು ಮಾಡಿದ್ದಾರೆ ಎಂಬುದನ್ನು ನೋಡಿರುವ ಪ್ರತ್ಯಕ್ಷದರ್ಶಿಗಳು ಹಾಗೂ ಅವರ ಕುಟುಂಬ ಸದಸ್ಯರು ಇದ್ದಾರೆ. ಆರೋಪಿಗಳು ಯಾರು ಎಂಬ ಸುಳಿವು ಸಿಕ್ಕಿರುವ ಹಿನ್ನೆಲೆ ನಮ್ಮ ಸಿಬ್ಬಂದಿ ಆ ಸಂಬಂಧ ಕಾರ್ಯೋನ್ಮುಖರಾಗಿದ್ದಾರೆ. ಆದಷ್ಟು ಬೇಗ ಆರೋಪಿಗಳನ್ನು ಬಂಧಿಸುತ್ತೇವೆ ಮತ್ತು ಕೊಲೆಗೆ ಕಾರಣ ಏನೆಂಬುದನ್ನು ಬಾಯಿ ಬಿಡಿಸುತ್ತೇವೆ ಎಂದು ತಿಳಿಸಿದರು.

ಈ ಕುರಿತು ಮೃತನ ತಾಯಿ ಮಾತನಾಡಿದ್ದು, 'ಮಗ ಮನೆಯ ಹೊರಗಡೆ ಇದ್ದ. ನಾಲ್ಕೈದು ಹುಡುಗರು ಬಂದಿದ್ದರು. ಮಗನ ಪಕ್ಕದಲ್ಲಿದ್ದವನು ಅವನಿಗೆ ಚಾಕುವಿನಿಂದ ಚುಚ್ಚಿದ. ಆಗ ನನ್ನ ಮಗ ಮನೆಯೊಳಗೆ ಓಡಿ ಹೋಗಿ ಬಾಗಿಲು ಹಾಕಿಕೊಂಡ. ಆ ಬಾಗಿಲನ್ನು ಮುರಿದು ಅವನಿಗೆ ಹೊಡೆದಿದ್ದಾರೆ. ಹಲ್ಲೆ ನಡೆಸಿದವರು ಅವನ ಸ್ನೇಹಿತರೇ ಆಗಿದ್ದು, ನಮಗೂ ಹೊಡೆದರು ಎಂದು ಹೇಳಿದ್ದಾರೆ.

# ದ್ವಿತೀಯ ಪಿಯುಸಿ ರಾಜ್ಯ ಟಾಪರ್ ಸೃಷ್ಟಿ ಎಂ.ಪಾಟೀಲ್‌ಗೆ ಗೌರವ

**ಕಲಬುರಗಿ:ಏ.11:** ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ 598 ಅಂಕಗಳನ್ನು ಪಡೆದು ರಾಜ್ಯ ಟಾಪರ್ ಆಗಿ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿರುವ ಸೃಷ್ಟಿ ಎಂ.ಪಾಟೀಲ ಅವರಿಗೆ ನಗರದ ಖಾದ್ರಿ ಚೌಕ್‌ನಲ್ಲಿನ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶುಕ್ರವಾರ ಸಂಜೆ ಜರುಗಿದ ಅಭಿನಂದನಾ ಕಾರ್ಯಕ್ರಮದಲ್ಲಿ ಸತ್ಕರಿಸಿ, ಗೌರವಿಸಲಾಯಿತು.

ಉಪನ್ಯಾಸಕ, ಬಳಗದ ಅಧ್ಯಕ್ಷ ಎಚ್.ಬಿ.ಪಾಟೀಲ, ನಿವೃತ್ತ ಉಪನ್ಯಾಸಕ ನೀಲಕಂಠಯ್ಯ ಹಿರೇಮಠ ಮಾತನಾಡಿ, ಸೃಷ್ಟಿಯು ರಾಜ್ಯಕ್ಕೆ ಟಾಪರ್ ಆಗುವ ಮೂಲಕ ಕಲಬುರಗಿ ಜಿಲ್ಲೆಯ ಹೊಸ ಇತಿಹಾಸವನ್ನು 'ಸೃಷ್ಟಿ'ಸಿದ್ದಾಳೆ.ಈ ಸಾಧನೆ ಎಲ್ಲರಿಗೆ ಪ್ರೇರಣೆ, ಮಾದರಿಯಾಗಿದೆ ಎಂದರು. ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್ ಮಾತನಾಡಿ, ಸೃಷ್ಟಿಗೆ ನಮ್ಮ ಸಂಸ್ಥೆಯಲ್ಲಿ 6 ತಿಂಗಳುಗಳ ಕಾಲ ಬೇಸಿಕ್ ಕಂಪ್ಯೂಟರ ತರಬೇತಿ ಕೋರ್ಸ್ಗೆ ಉಚಿತವಾಗಿ ಪ್ರವೇಶ ನೀಡುತ್ತೇನೆ ಎಂದು ಇದೇ ಸಂದರ್ಭದಲ್ಲಿ ಘೋಷಿಸಿದರು.




ಕಾರ್ಯಕ್ರಮದಲ್ಲಿ ಶಿವಯೋಗೆಪ್ಪಾ ಎಸ್.ಬಿರಾದಾರ, ಸವಿತಾ ಎಂ.ಪಾಟೀಲ, ಮಹೇಶ ಮಡ್ಡೆ, ವಿಜಯಲಕ್ಷೀ ಗೊಬ್ಬುರ, ವಿಜಯಲಕ್ಷೀ ಠಾಕೋರ, ಇಂದಿರಾ ಬನಶೆಟ್ಟಿ, ಪೂಜಾ ಹೂಗಾರ, ಕಾವೇರಿ ಹೌದೆ, ಮುಸ್ಕಾನ ಶೇಖ್, ಸ್ನೇಹಾ ಚೌಹಾಣ, ರುಕ್ಸಾನಾ ಪಟೇಲ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ನಿಷೇಧಿತ ಗಾಂಜಾ ಸಾಗಿಸುತ್ತಿದ್ದ ಆರೋಪಿ ಬಂಧನ6.13 ಲಕ್ಷ ರೂ.ಮೌಲ್ಯದ 6 ಕೆ.ಜಿ.,450 ಗ್ರಾಂ.ಗಾಂಜಾ ಜಪ್ತಿ

ಕಲಬುರಗಿ,ಏ.11–ನಿಷೇಧಿತ ಗಾಂಜಾ ಸಾಗಿಸುತ್ತಿದ್ದ ಆರೋಪಿಯೊಬ್ಬನನ್ನು ಬಂಧಿಸಿರುವ ವಿಶ್ವವಿದ್ಯಾಲಯ ಪೊಲೀಸರು 6.13 ಲಕ್ಷ ರೂ.ಮೌಲ್ಯದ 6 ಕೆ.ಜಿ., 450 ಗ್ರಾಂ.ಜಪ್ತಿ ಮಾಡಿದ್ದಾರೆ.

ನಗರದ ಹೊರವಲಯದ ಕೋಟನೂರ (ಡಿ) ಸೀಮಾಂತರದ ಜೇವರ್ಗಿ ರಸ್ತೆಯ ವಾಜಪೇಯಿ ಬಡಾವಣೆಯ ರಸ್ತೆ ಬದಿಯಲ್ಲಿ ನಿಷೇಧಿತ ಗಾಂಜಾ ಸಾಗಿಸಲು ಯತ್ನಿಸಲಾಗುತ್ತಿದೆ ಎಂಬ ಮಾಹಿತಿ ಮೇಲೆ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಅವರ ಮಾರ್ಗದರ್ಶನದಲ್ಲಿ ಎಸಿಪಿ ಪ್ರವೀಣ್ ನಾಯಕ್, ವಿಶ್ವವಿದ್ಯಾಲಯ ಪೊಲೀಸ್ ಠಾಣೆ ಪಿಐ ಚಂದ್ರಶೇಖರ ತಿಗಡಿ, ಪಿಎಸ್ಐ ಸಿದ್ದಪ್ಪ ಸೈದಾಪೂರ, ಸಿಬ್ಬಂದಿಗಳಾದ ಈರಣ್ಣ, ಸಂಜುಕುಮಾರ, ವಿಠ್ಠಲ, ಪ್ರಕಾಶ, ರಾಜಕುಮಾರ ಪವಾರ, ನಾಗೇಂದ್ರ, ಶಿವಶರಣ, ಸಿದ್ದಣ್ಣ, ಮಹೇಶ, ಯಶ್ವಂತರಾವ, ಶಿವಶರಣಪ್ಪ ಅವರನ್ನು ಒಳಗೊಂಡ ತಂಡ ದಾಳಿ ನಡೆಸಿ ಮೈಸೂರು ಜಿಲ್ಲೆಯ, ಹೆಚ್.ಡಿ.ಕೋಟೆ ತಾಲ್ಲೂಕಿನ ಸೋಳೆಪೂರದ ದೇವರಾಜ ನಾಯಕ ತಂದೆ ಭೀಮಾನಾಯಕ (38) ಎಂಬಾತನನ್ನು ಬಂಧಿಸಿ 6,43,200 ರೂ.ಮೌಲ್ಯದ 6 ಕೆ.ಜಿ, 450 ಗ್ರಾಂ.ಗಾಂಜಾ, 1200 ರೂ.ನಗದು, 1 ವಿವೋ ಮೊಬೈಲ್, 2 ಬ್ಯಾಗ್ ಜಪ್ತಿ ಮಾಡಿದ್ದಾರೆ. ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE